# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 | ಸಂಚಿಕೆ – 30 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ : 04–08–2023 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 01 | Issue - 30 | Title- Code: KARKAN 28269 | Chitradurga | Date : 04-08-2023 Friday | Page: 4 | Price: Rs. 2-00



ಒಳ ಪುಟದ ಸುದ್ದಿಗಳು

2 ಪಠ್ಯದ ಜೊತೆಗೆ ಸಂಸ್ಕಾರದ ಜ್ಞಾನ ನೀಡಿ : ಶಾಸಕ ಬಿ.ಜಿ. ಗೋವಿಂದಪ್ಪ

3 ಉತ್ತಮ ಸಮಾಜಕ್ಕೆ ಪತ್ರಕರ್ತರ ಸೇವೆ ಅಮೂಲ್ಯವಾದದ್ದು : ಶಾಸಕ

4 ಗುಣಮಟ್ಟದ ಶಿಕ್ಷಣದಿಂದ ಒಳ್ಳೆ ಫಲಿತಾಂಶ : ಕೆ. ರವಿಶಂಕರ್‌ರೆಡ್ಡಿ


# ನೀರು ಸರಬರಾಜು ಸಹಾಯಕ ಸಸ್ಪೆಂಡ್ ಹಾಗೂ ಇಬ್ಬರು ಹೊರಗುತ್ತಿಗೆ ನೌಕರರು ಸೇವೆಯಿಂದ ವಜಾ, ಇಬ್ಬರ ಅಮಾನತಿಗೆ ಶಿಫಾರಸ್ಸು

**ಚಿತ್ರದುರ್ಗ** : ಚಿತ್ರದುರ್ಗ ನಗರ ಸಮೀಪದ ಕವಾಡಿಗರ ಹಟ್ಟಿಯಲ್ಲಿ ಕಲುಷಿತ ನೀರು ಸೇವಿಸಿ ಸಾರ್ವಜನಿಕರ ಮರಣ ಹಾಗೂ ಅಸ್ವಸ್ಥರಾದ ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರು ಇಂಜಿನಿಯರ್‌ಗಳನ್ನು ಕರ್ತವ್ಯ ನಿರ್ಲಕ್ಷ್ಯತೆ ಆರೋಪದ ಮೇಲೆ ಅಮಾನತುಗೊಳಿಸಲು ಶಿಫಾರಸು ಮಾಡಲಾಗಿದ್ದು, ಒಬ್ಬರು ನೀರು ಸರಬರಾಜು ಸಹಾಯಕರನ್ನು ಅಮಾನತುಗೊಳಿಸಲಾಗಿದೆ ಹಾಗೂ ಇಬ್ಬರು ಹೊರಮೂಲ ಆಧಾರದ ಮೇಲೆ ಸೇವೆ ಸಲ್ಲಿಸುತ್ತಿದ್ದ ವಾಲ್ವ್ ಮ್ಯಾನ್ ಗಳನ್ನು ಸೇವೆಯಿಂದ ತೆಗೆದುಹಾಕಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ತಿಳಿಸಿದ್ದಾರೆ.

ಕಳೆದ ಜು. 31 ರಂದು ಮಧ್ಯಾಹ್ನದ ನಂತರದಲ್ಲಿ ಕವಾಡಿಗರ ಹಟ್ಟಿಯ ಓವರ್ ಹೆಡ್ ಟ್ಯಾಂಕ್ ನಿಂದ ನೀರು ಸರಬರಾಜು ಆಗುವ ಪ್ರದೇಶದ ಕೆಲವು ನಿವಾಸಿಗಳು ಅಸ್ವಸ್ಥರಾಗಿದ್ದು, ಈ ಪ್ರದೇಶದಲ್ಲಿ ವಾಸಿಸುತ್ತಿದ್ದ ಮಂಜುಳ ಎಂಬುವವರು ಅಸ್ವಸ್ಥರಾಗಿ, ಆಗಸ್ಟ್ 01 ರಂದು ಬೆಳಿಗ್ಗೆ ಮೃತಪಟ್ಟಿರುತ್ತಾರೆ, ಇವರ ಹೆಣ್ಣು ಮಗು ಕೂಡ ಅಸ್ವಸ್ಥರಾಗಿದ್ದು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆ–ಯುತ್ತಿದೆ. ಜು. 31 ರಿಂದ ಆ. 01 ರವರೆಗೆ ಈ ಪ್ರದೇಶದ ಹಲವು ಸಾರ್ವಜನಿಕರು ಅಸ್ವಸ್ಥರಾಗಿ ಆಸ್ಪತ್ರೆಗೆ ದಾಖಲಾಗಿದ್ದು, ಮೃತ ಮಹಿಳೆಯ ಪತಿ ಈ ಕುರಿತು ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆಗೆ ದೂರು ನೀಡಿದ್ದು, ಪ್ರಕರಣ ದಾಖಲಾಗಿ ಪೊಲೀಸ್ ವಿಚಾರಣೆ ಹಂತದಲ್ಲಿದೆ. ಜಿಲ್ಲಾ ಆರೋಗ್ಯಾಧಿಕಾರಿಗಳ ವರದಿಯಂತೆ ಜು. 31 ರಿಂದ ಆ. 02 ರವರೆಗೆ ಒಟ್ಟು 107 ಪ್ರಕರಣಗಳು ದಾಖಲಾಗಿದ್ದು, ಜಿಲ್ಲಾ ಆಸ್ಪತ್ರೆಯಲ್ಲಿ 65 ಮತ್ತು ಬಸವೇಶ್ವರ ವೈದ್ಯಕೀಯ ಆಸ್ಪತ್ರೆಯಲ್ಲಿ 42 ಅಸ್ವಸ್ಥರು ಚಿಕಿತ್ಸೆ ಪಡೆದಿದ್ದು, 07 ಜನರು ಗುಣಮುಖರಾಗಿ ಬಿಡುಗಡೆ ಹೊಂದಿರುತ್ತಾರೆ.

2 ನೇ ಪುಟಕ್ಕೆ

## ಸಿಎಂ ಸಿದ್ದರಾಮಯ್ಯ ಟ್ವೀಟ್

ಕವಾಡಿಗರಹಟ್ಟಿ ಕಲುಷಿತ ನೀರು ಸೇವಿಸಿ 3 ಮಂದಿ ಸಾವಿನ ಪ್ರಕರಣ ನಡೆದ ಬೆನ್ನಲ್ಲೇ ಸಿಎಂ ಸಿದ್ದರಾಮಯ್ಯ ಟ್ವೀಟ್ ಮಾಡಿ ಘಟನೆ ಕುರಿತು ಕೂಡಲೇ ತನಿಖೆ ನಡೆಸುವಂತೆ ಸೂಚಿಸಿದ್ದೇನೆ. ಜಿಲ್ಲಾಧಿಕಾರಿ ದಿವ್ಯಪ್ರಭು ಅವರ ಜೊತೆ ಮಾತನಾಡಿದ್ದೇನೆ. ಘಟನೆಯ ಸಂಪೂರ್ಣ ಮಾಹಿತಿ ಪಡೆದಿದ್ದೇನೆ. ಘಟನೆಗೆ ಕಾರಣ–ರಾದ ಯಾವುದೇ ಅಧಿಕಾರಿ ಇದ್ದರೂ ಕೂಡಲೇ ಅಮಾನತು ಮಾಡಿ ಎಂದು ಸೂಚಿಸಿದ್ದೇನೆ. ಉಪವಿಭಾಗಧಿಕಾರಿ ಕಾರ್ತಿಕ್ ಭೇಟಿ, ಮೃತರ ಕುಟುಂಬಕ್ಕೆ ಸಾಂತ್ವನ.

## ಆಸ್ಪತ್ರೆಗೆ ಶಾಸಕ ವೀರೇಂದ್ರ ಪಪ್ಪಿ ಭೇಟಿ



**ಭಯ ಬೇಡ ಎಲ್ಲಾ ರೀತಿ ಸಹಕಾರ ನೀಡುತ್ತೇನೆ : ಕೆ.ಸಿ. ವೀರೇಂದ್ರ ಪಪ್ಪಿ ಶಾಸಕರು ಚಿತ್ರದುರ್ಗ**

ಚಿತ್ರದುರ್ಗ ನಗರದ ಕಾವಡಿಗರಹಟ್ಟಿ ಘಟನೆ ನಡೆದ ಮೂರು ದಿನಗಳ ನಂತರ ಇಂದು ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅವರು ಜಿಲ್ಲಾ ಆಸ್ಪತ್ರೆಗೆ, ಬಸವೇಶ್ವರ ಆಸ್ಪತ್ರೆ, ಕಾವಡಿಗರಹಟ್ಟಿಗೆ ತೆರಳಿ ಸಾಂತ್ವನ ಹೇಳುವ ಕೆಲಸ ಮಾಡಿದರು. ಜಿಲ್ಲಾ ಆಸ್ಪತ್ರೆ ಭೇಟಿ ವೇಳೆ ರೋಗಿಗಳು ನಮಗೆ ಪರಿಹಾರ ಬೇಕೆ ಬೇಕು. ನಮ್ಮ ಮಕ್ಕಳು ತೆರಳುವ ಅಂಗನವಾಡಿ, ವಾಟರ್ ಟ್ಯಾಂಕ್ ಮತ್ತು ನಮ್ಮ ಕಾಲೋನಿಗೆ ಸಿ.ಸಿ.ಕ್ಯಾಮರ ಬೇಕು. ಸೂಕ್ತ ಪರಿಹಾರ ದೊರಕಿಸಲೇಬೇಕು ಎಂದು ಪಟ್ಟು ಹಿಡಿದ ಘಟನೆ ಜಿಲ್ಲಾ ಆಸ್ಪತ್ರೆಯಲ್ಲಿ ನಡೆಯಿತು. ಶಾಸಕರು ರೋಗಿಗಳ ಆರೋಗ್ಯ ವಿಚಾರಿಸಿ ನಿಮಗೆ ಏನಾದರೂ ಸಮಸ್ಯೆ ಇದೆಯೇ, ಉತ್ತಮವಾಗಿ ಚಿಕಿತ್ಸೆ ನೀಡುತ್ತಿದ್ದಾರಾ, ನೀರಿನ ಬಾಟಲಿ ಕೊಟ್ಟಿದ್ದಾರಾ ಎಂಬ ಮಾತುಗಳ ಮೂಲಕ ರೋಗಿಗಳನ್ನು ಸಂತೈಸಿದರು. ಸರ್ಕಾರದಿಂದ ಯಾರು ಪರಿಹಾರಕ್ಕೆ ಅರ್ಹರು ಎಂದು ಗುರುತಿಸಿ ಪರಿಹಾರ ಒದಗಿಸಲಾಗುತ್ತದೆ. ಒದಕ್ಕೆ ಜಾತಿ ವಿಷಯ ಬೇಡ ನಿಮ್ಮ ಜೊತೆ ನಾನಿದ್ದೇನೆ. ನೀವು ಚಿಂತೆ ಮಾಡಬೇಡಿ. ನಿಮ್ಮಕಾಲೋನಿಗೆ ಎಲ್ಲಾ ಸೌಲಭ್ಯ ಒದಗಿಸಲಾಗುತ್ತದೆ ಎಂದು ಸಮಾಧಾನಪಡಿಸಿದರು. ರೋಗಿಗಳು ತಪ್ಪಿತಸ್ಥರಿಗೆ ಶಿಕ್ಷೆ ಆಗಬೇಕು ಎಂದು ಶಾಸಕರಿಗೆ ಒತ್ತಾಯಿಸಿದಾಗ ಎಂತಹ ದೊಡ್ಡವರಿದ್ದರು ಸಹ ಅವರನ್ನು ಕಾನೂನಿನ ಮೂಲಕ ಖಂಡಿತ ಶಿಕ್ಷೆಗೆ ಒಳಪಡಿಸಲಾಗುತ್ತದೆ ಎಂದು ಅಭಯ ನೀಡಿದರು.

# ಸೋಲು ಗೆಲುವನ್ನು ಸಮಾನವಾಗಿ ಸ್ವೀಕರಿಸಿ : ಟಿ.ರಘುಮೂರ್ತಿ

**ಚಿತ್ರದುರ್ಗ** : ಕ್ರೀಡೆಗಳು ವಿದ್ಯಾರ್ಥಿಗಳಲ್ಲಿ ಭವಿಷ್ಯದ ನಾಯಕತ್ವ ಗುಣ ಮತ್ತು ಕ್ರೀಡಾ ಮನೋಭಾವ ಬೆಳೆಸಲು ಸಹಕಾರಿಯಾಗಿವೆ ಎಂದು ಶಾಸಕ ಟಿ.ರಘುಮೂರ್ತಿ ಹೇಳಿದರು.

ತುರುವನೂರು ಹೋಬಳಿಯ ಕಡಬನಕಟ್ಟೆ ಗ್ರಾಮದಲ್ಲಿ ಆಯೋಜಿಸಿದ್ದ ಹೋಬಳಿಮಟ್ಟದ ಪ್ರಾಥಮಿಕ ಶಾಲೆಗಳ ಕ್ರೀಡಾ ಕೂಟವನ್ನು ಉದ್ಘಾಟಿಸಿ ಮಾತನಾಡಿದರು.

ಗ್ರಾಮೀಣ ಭಾಗದ ಮಕ್ಕಳು ಅತ್ಯಂತ ಚಟುವಟಿಕೆ ಮತ್ತು ಹೆಚ್ಚಿನ ಆತ್ಮವಿಶ್ವಾಸದಿಂದ ಇರುತ್ತಾರೆ. ಮಕ್ಕಳು ನಾವು ಯಾವ ಅವರಿಗೆ ಮಾರ್ಗದರ್ಶನ ನೀಡುತ್ತಿವಿ ಆ ರೀತಿಯಲ್ಲಿ ಮಕ್ಕಳು ತಯಾರಾಗುತ್ತಾರೆ. ಎಲ್ಲಾ ಶಾಲೆಯಲ್ಲಿ ದೈಹಿಕ ಶಿಕ್ಷಕರು ಇದ್ದು ಇನ್ನು ಹೆಚ್ಚಿನ ಶ್ರಮ ವಹಿಸಿ ಮಕ್ಕಳನ್ನು ಸದೃಢ ಮಾಡಿ ಹೆಚ್ಚ ಹೆಚ್ಚ ಕ್ರೀಡೆಯಲ್ಲಿ ಭಾಗವಹಿಸಲು ಪ್ರೋತ್ಸಾಹಬೇಕು.

ವಿದ್ಯಾರ್ಥಿಗಳು ಬಾಲ್ಯದಿಂದಲೇ ಕ್ರೀಡಾ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವ ಮೂಲಕ ಸ್ಪರ್ಧಾತ್ಮಕ ಹಾಗೂ ಕ್ರೀಡಾ ಮನೋಭಾವವನ್ನು ಬೆಳೆಸಿಕೊಳ್ಳಬೇಕು. ಮಕ್ಕಳಲ್ಲಿರುವ ಕ್ರೀಡಾ ಪ್ರತಿಭೆಯನ್ನು ಗುರುತಿಸಲು ಇಂಥ ಕ್ರೀಡಾಕೂಟಗಳಿಂದ ಸಾಧ್ಯವಾಗುತ್ತದೆ. ದೇಶದ ಉತ್ತಮ ಕ್ರೀಡಾ ಪಟುಗಳನ್ನು ಗುರುತಿಸಲು ಇದೊಂದು ಉತ್ತಮ ವೇದಿಕೆಯಾಗಿದೆ' ಎಂದು ತಿಳಿಸಿದರು.

ಕ್ರೀಡಾಪಟುಗಳಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರ ಶಿಕ್ಷಣ ಮತ್ತು ಉದ್ಯೋಗದಲ್ಲಿ ಮೀಸಲಾತಿ ನೀಡುತ್ತಿದೆ. ಹೀಗಾಗಿ ಪ್ರತಿಭಾವಂತ ಕ್ರೀಡಾಪಟುಗಳನ್ನು ಗುರುತಿಸಿ ಅವರಿಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಸ್ಥಳೀಯ ಮಟ್ಟದ ಕ್ರೀಡಾಕೂಟಗಳು ಉತ್ತಮ ವೇದಿಕೆಯಾಗಿವೆ. ಇಲ್ಲಿ ಗೆದ್ದಂತಹ ಮಕ್ಕಳಿಗೆ ಮುಂದಿನ ದಿನಗಳಲ್ಲಿ ತರಬೇತಿ, ಮಾರ್ಗದರ್ಶನ ನೀಡಿ, ತಾಲ್ಲೂಕು, ಜಿಲ್ಲಾ ಮತ್ತು ರಾಜ್ಯಮಟ್ಟದಲ್ಲೂ ಪ್ರಶಸ್ತಿ ಪಡೆಯುವಂತಾಗಲು ನೆರವಾಗುತ್ತದೆ ಎಂದರು.



ಈ ಸಂದರ್ಭದಲ್ಲಿ ಮಾಜಿ ತಾಲ್ಲೂಕು ಪಂಚಾಯತ್ ಅಧ್ಯಕ್ಷರಾದ ಲಿಂಗರಾಜ್, ಕ್ಷೇತ್ರ ಶಿಕ್ಷಣಾಧಿಕಾರಿಗಳು ಎಸ್.ನಾಗಭೂಷಣ್, ಸರ್ಕಾರಿ ಪ್ರಾಥಮಿಕ ಶಾಲೆ ಮುಖ್ಯ ಶಿಕ್ಷಕ ತಿಮ್ಮಾರೆಡ್ಡಿ ಮತ್ತು ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ತಿಮ್ಮಾರೆಡ್ಡಿ ಮತ್ತು ಕ್ರೀಡಾಪಟುಗಳು, ಮುಖಂಡರು ಮತ್ತು ಪೋಷಕರು ಉಪಸ್ಥಿತರಿದ್ದರು.

# ಚಳ್ಳಕೆರೆ ಹಾಗೂ ಹೊಸದುರ್ಗ ಶಾಸಕರು ಆಸ್ಪತ್ರೆಗೆ ಭೇಟಿ



**ಚಿತ್ರದುರ್ಗ** : ಕವಾಡಿಗರಹಟ್ಟಿಯಲ್ಲಿ ಕಲುಷಿತ ನೀರು ಸೇವನೆಯಿಂದ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ರೋಗಿಗಳನ್ನು ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಮತ್ತು ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ ಭೇಟಿ ಮಾಡಿ ಆರೋಗ್ಯ ವಿಚಾರಿಸಿದರು ನಂತರ ಮತ್ತು ಬಸವೇಶ್ವರ ಅಸ್ಪತ್ರೆಗೆ ತೆರಳಿ ರೋಗಿಗಳ ಆರೋಗ್ಯ ವಿಚಾರಿಸಿ ನಂತರ ಕವಾಡಿಗರಹಟ್ಟಿ ಮೃತ ಕುಟುಂಬ ಭೇಟಿ ಮಾಡಿ ಸಾಂತ್ವನ ಹೇಳಿದರು.

ಶಾಸಕ ಟಿ.ರಘುಮೂರ್ತಿ ಮಾಧ್ಯಮ ಜೊತೆ ಮಾತನಾಡಿ ಎಲ್ಲಾ ರೋಗಿಗಳನ್ನು ಭೇಟಿ ಮಾಡಿ ಪ್ರಕರಣದ ಮಾಹಿತಿ ಪಡೆಯಲಾಗಿದೆ. ಯಾವುದೇ ಆತಂಕಪಡುವ ಅವಶ್ಯಕತೆ ಇಲ್ಲ. ನಮ್ಮ ಸರ್ಕಾರ ಅವರ ಜೊತೆಗೆ ಇದೆ. ಎಲ್ಲಾರೂ ಧೈರ್ಯದಿಂದ ಇರಬೇಕು. ನಿಮಗೆ ಅಗತ್ಯವಾದ ಚಿಕಿತ್ಸೆಯನ್ನು ಕೊಡಲಾಗುತ್ತದೆ. ಸಿಎಂ ಸಹ ಈ ಪ್ರಕರಣ ಸಂಬಂಧಿಸಿದಂತೆ ಮಾಹಿತಿ ಪಡೆದಿದ್ದು ತಪ್ಪಿತಸ್ಥರ ವಿರುದ್ಧ ಸೂಕ್ತ ಕ್ರಮ ಜರಿಗಿಸಲಾಗುತ್ತದೆ. ಮೃತಪಟ್ಟವರಿಗೆ ಪರಿಹಾರ ಸಹ ಘೋಷಣೆ ಮಾಡಾಲಾಗುತ್ತದೆ. ಈಗಾಗಲೇ ಜಿಲ್ಲಾಧಿಕಾರಿಗಳು ಮಾಹಿತಿ ಪಡೆದಿದ್ದು ಸರ್ಕಾರ ಮಾನದಂಡ ಪ್ರಕಾರ ಪರಿಹಾರ ಒದಗಿಸಲಾಗುತ್ತದೆ ಎಂದರು.

ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ ಮಾತನಾಡಿ ರೋಗಿಗಳು ಆರೋಗ್ಯ ಚೇತರಿ–ಕೆ ಕಾಣುತ್ತಿದೆ. ರೋಗಿಗಳಿಗೆ ಯಾವ ಕೊರತೆ ಆಗದಂತೆ ಚಿಕಿತ್ಸೆ ನೀಡಿ ಎಂದು ಸೂಚಿಸಲಾಗಿದೆ. ಇಂತಹ ಘಟನೆಗಳು ಆಗಬಾರದು. ಸೂಕ್ತ ಚಿಕಿತ್ಸೆ ಪಡೆದು ಶೀಘ್ರ ಗುಣಮುಖರಾಗಿ ನಿಮ್ಮ ಜೊತೆ ಸರ್ಕಾರ ಇದೆ ರೋಗಿಗಳಿಗೆ ಧೈರ್ಯ ತುಂಬಿದರು.

**ವೈದ್ಯರಿಂದ ಮಾಹಿತಿ** : ಇಬ್ಬರು ಶಾಸಕರು ಎಲ್ಲಾರೂ ಸಹ ಯಾವ ರೀತಿ ಚಿಕಿತ್ಸೆ ನೀಡುತ್ತಿದ್ದಿರಿ. ಏನದಾರೂ ಸಮಸ್ಯೆ ಇದೆಯಾ ಎಂದು ವಿಚಾರಿಸಿದಾಗ ಯಾವುದೇ ಆತಂಕವಿಲ್ಲ ಎಲ್ಲಾ ರೀತಿಯ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಡಿಎಸ್ ಬಸವರಾಜ್ ಶಾಸಕರಿಗೆ ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಡಿಸಿ ದಿವ್ಯಪ್ರಭು, ಉಪ ವಿಭಾಗಧಿಕಾರಿ ಕಾರ್ತಿಕ್ ಇದ್ದರು.

## ಫಾಸ್ಟ್ ನ್ಯೂಸ್

### ವಾಂತಿ–ಬೇದಿ ಪ್ರಕರಣ ನಿಯಂತ್ರಣಕ್ಕೆ ಬಂದಿದೆ : ಡಿ.ಸಿ.

**ಚಿತ್ರದುರ್ಗ** : ಚಿತ್ರದುರ್ಗ ನಗರ ಸಮೀಪದ ಕವಾಡಿಗರ ಹಟ್ಟಿಯಲ್ಲಿ ಕಲುಷಿತ ನೀರಿನಿಂದ ಉಂಟಾಗಿದೆ ಎನ್ನಲಾದ ವಾಂತಿಭೇದಿ ಪ್ರಕರಣಗಳು ಸದ್ಯ ನಿಯಂತ್ರಣದಲ್ಲಿದ್ದು, ಜನರು ಆತಂಕಪಡುವ ಅಗತ್ಯವಿಲ್ಲ. ಮುಂಜಾಗ್ರತಾ ದೃಷ್ಟಿಯಿಂದ ಸಾರ್ವಜನಿಕರು ಕಾಯಿಸಿ, ಆರಿಸಿದ ನೀರನ್ನು ಕುಡಿಯಲು ಬಳಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ತಿಳಿಸಿದ್ದಾರೆ.

ಕವಾಡಿಗರ ಹಟ್ಟಿಯಲ್ಲಿ ವಾಂತಿಭೇದಿ ಪ್ರಕರಣಗಳು ಹೆಚ್ಚಿನ ಸಂಖ್ಯೆಯಲ್ಲಿ ದಾಖಲಾದ ಕುರಿತಂತೆ ಎಲ್ಲ ಆಯಾಮಗಳಿಂದಲೂ ತನಿಖೆ ಹಾಗೂ ತಪಾಸಣೆ ನಡೆಸಲಾಗುತ್ತಿದೆ. ನೀರಿನ ಗುಣಮಟ್ಟದ ಬಗ್ಗೆಯೂ ತಜ್ಞ–ರಿಂದ ಪರೀಕ್ಷೆಗೆ ಒಳಪಡಿಸಲು ಕ್ರಮ ಕೈಗೊಳ್ಳಲಾಗಿದೆ. ಸದ್ಯ ಜನರಿಗೆ ಶುದ್ಧ ಕುಡಿಯುವ ನೀರು ಪೂರೈಕೆಗೂ ಕ್ರಮ ವಹಿಸಲಾಗಿದ್ದು, ಪರಿಸ್ಥಿತಿ ನಿಯಂತ್ರಣಕ್ಕೆ ಬಂದಿದೆ. ಈಗಾಗಲೆ ಸ್ಥಳದಲ್ಲಿ ತಾತ್ಕಾಲಿಕ ಚಿಕಿತ್ಸಾ ಕೇಂದ್ರವನ್ನು ತೆರೆದು, ವೈದ್ಯರಿಂದ ತಪಾಸಣೆ ಹಾಗೂ ಚಿಕಿತ್ಸೆಗೂ ವ್ಯವಸ್ಥೆ ಮಾಡಲಾಗಿದೆ. ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ. ಮಳೆಗಾಲದಲ್ಲಿ ಹೊಸ ನೀರು ಬಂದು, ಈ ನೀರು ಪೂರೈಕೆ ಮಾಡುವುದರಿಂದ ಮುಂಜಾಗ್ರತಾ ಕ್ರಮವಾಗಿ ಕಾಯಿಸಿ, ಆರಿಸಿದ ನೀರನ್ನು ಕುಡಿಯಲು ಉಪಯೋಗಿಸಬೇಕು. ಜಿಲ್ಲೆಯಲ್ಲಿನ ಎಲ್ಲ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ನೀರಿನ ಸಂಗ್ರಹಗಾರಗಳು, ಮೇಲ್ತೊಟ್ಟಿಗಳು, ಹಾಗೂ ಜಲ ಮೂಲಗಳನ್ನು ಪ್ರತಿ 15 ದಿನಗಳಿಗೊಮ್ಮೆ ಸ್ವಚ್ಛಗೊಳಿಸಬೇಕು, ಹಾಗೂ ಪ್ರತಿ ಬಾರಿಯೂ ನೀರಿನ ಗುಣಮಟ್ಟದ ಬಗ್ಗೆ ಪರಿಶೀಲನೆಯನ್ನು ಆಯಾ ನಗರಸಭೆ, ಪುರಸಭೆ, ಪಟ್ಟಣ ಪಂಚಾಯತಿ ಹಾಗೂ ಗ್ರಾಮ ಪಂಚಾಯತಿಗಳು ಕೈಗೊಳ್ಳುವಂತೆ ಈಗಾಗಲೆ ಅಧಿಕಾರಿಗಳಿಗೆ ತಾಕೀತು ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ತಿಳಿಸಿದ್ದಾರೆ.

### ಕಲುಷಿತ ನೀರಿನಿಂದ ಮೃತ ಪಟ್ಟ ಮನೆಗಳಿಗೆ ಎಸಿ ಭೇಟಿ

ಚಿತ್ರದುರ್ಗದಲ್ಲಿ ಕಲುಷಿತ ನೀರು ಸೇವಿಸಿ ಮೂವರು ಸಾವು ಪ್ರಕರಣಕ್ಕೆ ಸಂಬಂಧಿಸಿ ಚಿತ್ರದುರ್ಗ ನಗರದ ಕವಾಡಿಗರಹಟ್ಟಿ ಬಡಾವಣೆಗೆ ಎಸಿ ಕಾರ್ತಿಕ್ ಭೇಟಿ ನೀಡಿದ್ದಾರೆ. ಮೃತರ ಕುಟುಂಬಗಳ ಮನೆಗಳಿಗೆ ಭೇಟಿ ನೀಡಿ ಸಾಂತ್ವನ ಹೇಳಿದ್ದಾರೆ. ಎಸಿ ಕಾರ್ತಿಕ್ ಭೇಟಿ ವೇಳೆ ಮೃತ ರಘು ತಾಯಿ ವಿಮಲಮ್ಮ ಕಣ್ಣೀರಿಟ್ಟರು. ಬೆಂಗಳೂರಿನಲ್ಲೇ ಇದ್ದಿದ್ದರೆ ನನ್ನ ಮಗ ಬದುಕಿರುತ್ತಿದ್ದ. ಊರಿಗೆ ಬಂದು ಹೋಗಿದ್ದೇ ಜೀವಕ್ಕೆ ಕಂಟಕ ಆಯಿತೆಂದು ಗೋಳಾಡಿದ್ದಾರೆ.

### ಪ್ರಧಾನಿ ಮೋದಿಯನ್ನು ಭೇಟಿ : ಸಿದ್ದರಾಮಯ್ಯ



**ನಮ್ಮ ಜನ ವಾರ್ತೆ ನವದೆಹಲಿ** : ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ನವದೆಹಲಿಯಲ್ಲಿ ಪ್ರಧಾನಿ ಮೋದಿಯನ್ನು ಭೇಟಿ ಮಾಡಿದ್ದಾರೆ.

ಈ ಸಂದರ್ಭ ಮುಖ್ಯಮಂತ್ರಿಗಳು, ಪ್ರಧಾನಮಂತ್ರಿಗಳಿಗೆ ಮೈಸೂರು ಪೇಟ ತೊಡಿಸಿದ್ದರು. ಅದಷ್ಟೇ ಅಲ್ಲದೇ ವಿಶೇಷ ಮರದ ಸ್ಮರಣಿಕೆಯನ್ನು ಉಡುಗೊರೆಯನ್ನಾಗಿ ನೀಡಿದ್ದಾರೆ.

ತಮ್ಮ ಹುಟ್ಟು ಹಬ್ಬದ ದಿನದಂದೇ ಪ್ರಧಾನಿ ಮೋದಿಯವರನ್ನು ಭೇಟಿ ಮಾಡಿದ್ದು ವಿಶೇಷವಾಗಿತ್ತು. ಬಳಿಕ ಇಬ್ಬರೂ ಸೌಹಾರ್ದಯುತವಾಗಿ ಮಾತುಕತೆ ನಡೆಸಿದ್ದಾರೆ.

ಬೆಳಗ್ಗೆ 11 ಗಂಟೆಗೆ ಮೋದಿಯವರನ್ನು ಭೇಟಿಯಾಗಿ ಮಾತುಕತೆ ನಡೆಸಿದ ಸಿಎಂ ಸಿದ್ದರಾಮಯ್ಯ, ಹಣಕಾಸು ಸಚಿವ ನಿರ್ಮಲಾ ಸೀತಾರಾಮನ್, ರಕ್ಷಣಾ ಸಚಿವ ರಾಜನಾಥ ಸಿಂಗ್ ಹಾಗೂ ಭೂ ಸಾರಿಗೆ ಸಚಿವ ನಿತಿನ್ ಗಡ್ಕರಿ ಅವರನ್ನು ಭೇಟಿಯಾಗಿದ್ದಾರೆ.




**ಇಂದಿನ ಚಿನ್ನ ಮತ್ತು ಬೆಳ್ಳಿ ದರಗಳು : 91.6 Kdm- 5540/gm | 85 kdam - 5140/gm | ಬೆಳ್ಳಿ : 67000 / ಕೆಜಿ**

## ಫಾಸ್ಟ್ ನ್ಯೂಸ್

### ಶಾಸಕರ ಭೇಟಿಗೆ ಪ್ರತಿಭಟನೆ

**ಚಿತ್ರದುರ್ಗ :** ನಗರದ ಕವಾಡಿಗರಹಟ್ಟಿಯಲ್ಲಿ ಕಲುಷಿತ ನೀರು ಸೇವಿಸಿ 3 ಮಂದಿ ಸಾವನ್ನಪ್ಪಿರುವ ಘಟನೆ ನಡೆದು 3 ದಿನ ಕಳೆದರು ಸೌಜನ್ಯಕ್ಕೂ ಶಾಸಕ ವೀರೇಂದ್ರ ಪಪ್ಪಿ ಬಾರದಿರುವ ಬಗ್ಗೆ ಸ್ಥಳೀಯರು ತೀವ್ರ ಆಕ್ರೋಶ ವ್ಯಕ್ತ ಪಡಿಸಿದ್ದಾರೆ.3 ಮಂದಿ ಸಾವನ್ನಪ್ಪಿದ್ದರೆ ಹಲವು ಮಂದಿ ಸಾವು ಬದುಕಿನ ಮಧ್ಯ ಹೋರಾಟ ಮಾಡುತ್ತಿದ್ದರೂ ಶಾಸಕ ವೀರೇಂದ್ರ ಪಪ್ಪಿ ಸೌಜನ್ಯಕ್ಕಾದರೂ ಬಂದು ಸಾಂತ್ವನ ಹೇಳಿಲ್ಲ. ಗೆದ್ದ 3 ತಿಂಗಳಿಗೆ ಶಾಸಕ ವೀರೇಂದ್ರ ಪಪ್ಪಿ ಬೇಜವಬ್ದಾರಿ ಪ್ರದರ್ಶನ ಮಾಡುತ್ತಿದ್ದು ಶಾಸಕರ ನಡೆ ವಿರುದ್ಧ ತೀವ್ರ ಆಕ್ರೋಶ ವ್ಯಕ್ತವಾಗುತ್ತಿದೆ.ನೂರಾರು ಮಂದಿ ಅಸ್ವಸ್ಥರಾಗಿ ನರಳುತ್ತಿರುವ ಕವಾಡಿಗರಹಟ್ಟಿ ನಿವಾಸಿಗಳ ಸಮಸ್ಯೆ ಆಲಿಸದ ಶಾಸಕರು ಖಾಸಗಿ ಕಾರ್ಯಕ್ರಮಗಳಿಗೆ ಹೋಗುತ್ತಿರುವುದು ದುರಂತ ಎಂದು ಅಕ್ರೋಶ ಹೊರ ಹಾಕಿದ್ದಾರೆ.

ಇಂತಹ ದೊಡ್ಡ ಸಮಸ್ಯೆ ಜನರಿಗೆ ಎದುರಾಗಿದ್ದು ಈ ಸಮಯದಲ್ಲಿ ಸಂತ್ರಸ್ತರ ಕುಟುಂಬಗಳ ಸ್ಥಳಕ್ಕೆ ಕೂಡಲೇ ಧಾವಿಸಿ ಬಡವರ ರಕ್ಷಣೆಗೆ ನಿಲ್ಲಬೇಕಿದ್ದ ಶಾಸಕರು ಪತ್ತೆ ಇಲ್ಲ. ಕಳೆದ ಮೂರು ದಿನಗಳಿಂದ ಗೋವಾ ಮತ್ತು ದೆಹಲಿಯದ್ದಾರೆಂದು ಆಪ್ತರು ಹೇಳುತ್ತಿದ್ದು ಶಾಸಕರ ನಡೆಗೆ ಕವಾಡಿಗರಹಟ್ಟಿ ಜನರು ಭಾರೀ ವಿರೋಧ ವ್ಯಕ್ತಪಡಿಸುತ್ತಿದ್ದಾರೆ. ಘಟನೆಯಾಗೆ ಮೂರು ದಿನವಾದ್ರೂ ಸ್ಥಳಕ್ಕೆ ಬಾರದ ಚಿತ್ರದುರ್ಗ ಶಾಸಕ ಕೆಸಿ ವೀರೇಂದ್ರ ಪಪ್ಪಿ ವಿರುದ್ದ ವಿಜಯಸೇನೆ ಜಿಲ್ಲಾ ಅಧ್ಯಕ್ಷ ಕೆ.ಟಿ.ಶಿವಕುಮಾರ್ ನೇತೃತ್ವದಲ್ಲಿ ನೂರಾರು ಜನರು ಕವಾಡಿಗರಹಟ್ಟಿ ಬಳ ರಸ್ತೆ ತಡೆ ನಡೆಸಿ ಧಿಕ್ಕಾರ ಕೂಗಿದರು.

### ರಾಷ್ಟ್ರ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಚಿತ್ರದುರ್ಗ :** 2023ನೇ ಸಾಲಿನಲ್ಲಿ ಸಾಧಾರಣ ಪ್ರತಿಭೆಯುಳ್ಳ ಮಕ್ಕಳಿಗೆ ರಾಷ್ಟ್ರ ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ್ 31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.

ಮಗುವು ತನ್ನಲ್ಲಿನ ಸಮಯ ಪ್ರಜ್ಞೆಯನ್ನು ಉಪಯೋಗಿಸಿ ಜೀವದ ಹಂಗನ್ನು ತೊರೆದು ಇತರರ ಪ್ರಾಣ ರಕ್ಷಣೆಗಾಗಿ ಧೈರ್ಯ ಸಾಹಸ ತೋರಿಸಿದ ಪ್ರಕರಣಗಳು ಇತರೆ ಮಕ್ಕಳಿಗೆ ಮಾದರಿಯಾಗುವುದನ್ನು ಉತ್ತೇಜಿಸುವ ಸಲುವಾಗಿ ಶೌರ್ಯ ಪ್ರಶಸ್ತಿ ಹಾಗೂ ಕಲೆ, ಸಾಂಸ್ಕೃತಿಕ, ಯಾವುದೇ ಕ್ಷೇತ್ರದಲ್ಲಿ ನಾವೀನ್ಯತೆ, ರಾಷ್ಟ್ರೀಯ ಮಟ್ಟದಲ್ಲಿ ತಾರ್ಕಿಕ ಸಾಧನೆ, ಕ್ರೀಡೆ, ಸಮಾಜ ಸೇವೆ ಮತ್ತು ಕೇಂದ್ರ ಆಯ್ಕೆ ಸಮಿತಿಯ ನಿರ್ಧಾರದ ಪ್ರಕಾರ ಮಾನ್ಯತೆಗೆ ಯೋಗ್ಯವಾದ ಯಾವುದೇ ಕ್ಷೇತ್ರದಲ್ಲಿ ಅತ್ಯುತ್ತಮ ಸಾಧನೆಯನ್ನು ಮಾಡಿರುವಂತಹ 18 ವರ್ಷದೊಳಗಿನ (ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ-ಕ್ಕೆ) ಮಕ್ಕಳಿಗೆ ರಾಷ್ಟ್ರ ಪ್ರಶಸ್ತಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಭಾರತ ಸರ್ಕಾರದ ಅಧಿಕೃತ ವೆಬ್‌ಸೈಟ್ **National awards portal on https://awards.gov.in / www.wcd.nic.in**ನಲ್ಲಿ ಅರ್ಜಿದಾರರು ಆಗಸ್ಟ್ 31 ರೊಳಗೆ ಪ್ರಸ್ತಾವನೆಗಳನ್ನು ಭಾರತ ಸರ್ಕಾರಕ್ಕೆ ಸಲ್ಲಿಸುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಆಡಿಯೋ-ವೀಡಿಯೋ ಎಡಿಟಿಂಗ್ ತರಬೇತಿ

**ಚಿತ್ರದುರ್ಗ :** ಕರ್ನಾಟಕ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅಂಗಸಂಸ್ಥೆಯಾದ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ವತಿಯಿಂದ ಆಡಿಯೋ-ವೀಡಿಯೋ ಎಡಿಟಿಂಗ್ ತರಬೇತಿ ಕಾರ್ಯಾಗಾರವನ್ನು ಉಪನ್ಯಾಸಕರಿಗೆ, ಶಿಕ್ಷಕರಿಗೆ, ಸಂಶೋಧನಾ ವಿದ್ಯಾರ್ಥಿಗಳಿಗೆ, ವಿದ್ಯಾರ್ಥಿಗಳಿಗೆ 2023ರ ಆಗಸ್ಟ್ 29 ರಿಂದ ಸೆಪ್ಟೆಂಬರ್ 02 ರವರೆಗೆ ಬೆಂಗಳೂರಿನ ಅಕಾಡಮಿ ಕಚೇರಿಯಲ್ಲಿ (ಯು.ಆರ್. ರಾವ್ ವಿಜ್ಞಾನ ಭವನ, ತೋಟಗಾರಿಕಾ ವಿಜ್ಞಾನಗಳ ಕಾಲೇಜು ಮಹಾದ್ವಾರ, ಜಿ.ಕೆ.ವಿ.ಕೆ. ಆವರಣ, ದೊಡ್ಡಬೆಟ್ಟಹಳ್ಳಿ ಬಸ್ ನಿಲ್ದಾಣ, ವಿದ್ಯಾರಣ್ಯಪುರ, ಬೆಂಗಳೂರು) ಕಾರ್ಯಾಗಾರ ಆಯೋಜಿಸಲಾಗಿದೆ.

ಆಸಕ್ತರು ಆನ್‌ಲೈನ್‌ನಲ್ಲಿ ಅರ್ಜಿಯನ್ನು ಭರ್ತಿ ಮಾಡಿ ಅಕಾಡೆಮಿ ವೆಬ್‌ಸೈಟ್ **https://forms.gle/2qH2JmtMfCBFq7zv5** ನಲ್ಲಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಅಕಾಡೆಮಿಯ ವೆಬ್‌ಸೈಟ್ ಇಣಚಿಥಿಚಿಜಜಟಥಿ.ಟಿ ನಲ್ಲಿ ಮತ್ತು ಅಕಾಡೆಮಿಯ ದೂರವಾಣಿ ಸಂಖ್ಯೆ 080 29721550 ಗೆ ಸಂಪರ್ಕಿಸಬಹುದು ಎಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಎ.ಎಂ. ರಮೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶೇ.50ರ ರಿಯಾಯಿತಿಲ್ಲಿ ಪುಸ್ತಕ ಲಭ್ಯ

**ಚಿತ್ರದುರ್ಗ :** ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ 2023ರ ಆಗಸ್ಟ್ ತಿಂಗಳು ಪೂರ್ತಿ ಕನ್ನಡ ಪುಸ್ತಕ ಪ್ರಾಧಿಕಾರದ ಎಲ್ಲಾ ಪುಸ್ತಕಗಳನ್ನು ಶೇ.50ರ ರಿಯಾಯಿತಿ ದರಗಳಲ್ಲಿ ದೊರೆಯುತ್ತವೆ. ಪುಸ್ತಕ ಪ್ರಿಯರು ಈ ಅವಕಾಶವನ್ನು ಒಳಸಿಕೊಳ್ಳಬಹುದು.

ಬೆಂಗಳೂರಿನ ಕನ್ನಡ ಭವನದ ಸಿರಿಕನ್ನಡ ಪುಸ್ತಕ ಮಳಿಗೆಯಲ್ಲಿ ಹಾಗೂ ಎಲ್ಲಾ ಜಿಲ್ಲೆಗಳ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದಿಂದ ತೆರೆಯಲಾದ ಎಲ್ಲಾ ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆಗಳಲ್ಲಿ ಮತ್ತು ಕನ್ನಡ ಪುಸ್ತಕ ಪ್ರಾಧಿಕಾರದ ವೆಬ್‌ಸೈಟ್ **www.kannadapustakapradhikara.com** ನಲ್ಲಿ ಶೇ.50ರ ರಿಯಾಯಿತಿ ದರದಲ್ಲಿ ಲಭ್ಯವಿದೆ ಎಂದು ಆಡಳಿತಾಧಿಕಾರಿ ಕೆ.ಬಿ. ಕಿರಣ್ ಸಿಂಗ್ ತಿಳಿಸಿದ್ದಾರೆ.

# ಇಬ್ಬರು ಹೊರಗುತ್ತಿಗೆ ನೌಕರರು ವಜಾ, ಇಬ್ಬರ ಅಮಾನತಿಗೆ ಶಿಫಾರಸ್ಸು

ಮೊದಲ ಪುಟದಿಂದ.. ಮೂವರು ಐಸಿಯುನಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಉಳಿದವರ ಆರೋಗ್ಯ ಸ್ಥಿರವಾಗಿದ್ದು, ಚಿಕಿತ್ಸೆ ಮುಂದುವರೆದಿದೆ.

ಪ್ರಕರಣ ಕುರಿತು ಸಮಗ್ರ ತನಿಖೆ ನಡೆಸುವ ಸಲುವಾಗಿ ಉಪವಿಭಾಗಾಧಿಕಾರಿಗಳು, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರು, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಕಾರ್ಯಪಾಲಕ ಇಂಜಿನಿಯರ್, ಜಿಲ್ಲಾ ಸರ್ವೇಕ್ಷಣಾಧಿಕಾರಿಗಳು, ಪರಿಸರ ಅಧಿಕಾರಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯಪಾಲಕ ಅಭಿಯಂತರರನ್ನು ಒಳಗೊಂಡ ಜಂಟಿ ಸಮಿತಿ ರಚಿಸಿದ್ದು, ವರದಿ ನೀಡಲು ಸೂಚಿಸಲಾಗಿದೆ.

ಶುದ್ಧ ಕುಡಿಯುವ ನೀರು ಸರಬರಾಜು ಕಾರ್ಯವು ನಗರಸಭೆಯ ಆದ್ಯ ಕರ್ತವ್ಯವಾಗಿದ್ದು, ಸಾರ್ವಜನಿಕರಿಗೆ ಶುದ್ಧ ಕುಡಿಯುವ ನೀರು ಸರಬರಾಜು ಮಾಡುವಲ್ಲಿ ಕೈಗೊಳ್ಳಬೇಕಾದ ಮುನ್ನೆಚ್ಚರಿಕಾ ಕ್ರಮಗಳು ಹಾಗೂ ಮಾಡಬೇಕಾದ ಕರ್ತವ್ಯಗಳ ಬಗ್ಗೆ ಸರ್ಕಾರದಿಂದ ಹಾಗೂ ಪೌರಾಡಳಿತ ಇಲಾಖೆಯಿಂದ ಹಾಗೂ ಜಿಲ್ಲಾಧಿಕಾರಿಗಳಿಂದ ಜಿಲ್ಲೆಯ ಎಲ್ಲ ನಗರ ಸ್ಥಳೀಯ ಸಂಸ್ಥೆಗಳಿಗೆ ಸೂಚನೆಗಳನ್ನು ಕಾಲಕಾಲಕ್ಕೆ ನೀಡಲಾಗಿರುತ್ತದೆ. ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿನ ಕುಡಿಯುವ ನೀರಿನ ಸರಬರಾಜು ಮೂಲ, ಶುದ್ಧೀಕರಣ ಘಟಕ, ಓ.ಹೆಚ್.ಟಿ, ಕೊಳವೆ ಬಾವಿ ಹಾಗೂ ಬಳಕೆದಾರರ ಕೊನೆಯ ಪಾಯಿಂಟ್‌ನಲ್ಲಿ ನೀರಿನ ಮಾದರಿಗಳನ್ನು ಸಂಗ್ರಹಿಸಿ, ನೀರಿನ ಗುಣಮಟ್ಟದ ಪರೀಕ್ಷೆ ಮಾಡಿಸಿ, ನೀರು ಯೋಗ್ಯವಿರುವ ಬಗ್ಗೆ ಪರೀಕ್ಷಾ ವರದಿಗಳನ್ನು ಸಲ್ಲಿಸಲು ಸೂಚಿಸಲಾಗಿರುತ್ತದೆ. ಆದರೆ ಈವರೆಗೂ ವರದಿ ಸಲ್ಲಿಕೆಯಾಗಿಲ್ಲ.

ಜಿಲ್ಲಾ ಸರ್ವೇಕ್ಷಣಾ ಘಟಕವು ಕವಾಡಿಗರಹಟ್ಟಿ ಪ್ರದೇಶದಿಂದ ಸಂಗ್ರಹಿಸಿದ 05 ನೀರಿನ ಮಾದರಿಗಳನ್ನು ಸೂಕ್ಷ್ಮಾಣು ಜೀವಿ ಪರೀಕ್ಷೆಗೊಳಿಸಿದ್ದು, ಈ ಪೈಕಿ ನಾಲ್ಕು ಮಾದರಿಗಳಲ್ಲಿ ಹೆಚ್-2 ಎಸ್ ಪರೀಕ್ಷಾ ವಿಧಾನದಿಂದ ತಿಳಿದುಬಂದಂತೆ ಕುಡಿಯಲು ಯೋಗ್ಯವಾಗಿಲ್ಲ ಎಂದು ಜಿಲ್ಲಾ ಸರ್ವೇಕ್ಷಣಾಧಿಕಾರಿಗಳು ಆ. 03 ರಂದು ವರದಿ ಸಲ್ಲಿಸಿರುತ್ತಾರೆ. ನಗರದ ಎಲ್ಲ ಕುಡಿಯುವ ನೀರಿನ ಸಂಗ್ರಹ ತೊಟ್ಟಿಗಳನ್ನು ಸ್ವಚ್ಛಗೊಳಿಸಿ, ನೀರಿನ ಲೀಕೇಜ್‌ಗಳನ್ನು ದುರಸ್ತಿಗೊಳಿಸಿ, ಕ್ಲೋರಿನೇಷನ್ ಮಾಡುವಂತೆ ಹಲವು ಬಾರಿ ತಿಳಿಸಲಾಗಿದ್ದರೂ ಸಹಾಯಕ ಕಾರ್ಯಪಾಲಕ ಅಭಿಯಂತರ ಮಂಜುನಾಥ ಆರ್ ಗಿರಡ್ಡಿ ಹಾಗೂ ಕಿರಿಯ ಅಭಿಯಂತರ ಎಸ್.ಆರ್. ಕಿರಣ್ ಕುಮಾರ್ ಅವರು ಸೂಚನೆಯನ್ವಯ ಕಾರ್ಯ ನಿರ್ವಹಿಸಿಲ್ಲ. ಹೀಗಾಗಿ ಕರ್ತವ್ಯ ನಿರ್ಲಕ್ಷ್ಯ ಎಸಗಿರುವ ಬಗ್ಗೆ ಅಧಿಕಾರಿಗಳಿಗೆ ಕಾರಣ ಕೇಳಿ ನೋಟಿಸ್ ಜಾರಿಗೊಳಿಸಲಾಗಿತ್ತು. ಪೌರಾಯುಕ್ತರು ಹಾಗೂ ಕಿರಿಯ ಅಭಿಯಂತರ ಎಸ್.ಆರ್. ಕಿರಣ್ ಕುಮಾರ್ ಅವರು ತಮ್ಮ ಸಮಜಾಯಿಷಿ ನೀಡಿದ್ದು, ಸಹಾಯಕ ಕಾರ್ಯಪಾಲಕ ಅಭಿಯಂತರರು ನೋಟಿಸ್‌ಗೆ ಉತ್ತರವಾಗಿ ತಮ್ಮ ಸಮಜಾಯಿಷಿ ಸಲ್ಲಿಸುವ ಪ್ರಯತ್ನ ಸಹ ಮಾಡಿರುವುದಿಲ್ಲ. ಕಿರಿಯ ಅಭಿಯಂತರರು ತಮ್ಮ ಕರ್ತವ್ಯ ನಿರ್ಲಕ್ಷ್ಯತೆ ಬಗ್ಗೆ ಯಾವುದೇ ಸಮರ್ಥನೀಯ ಕಾರಣ ನೀಡಿರುವುದಿಲ್ಲ.

ನಾಲ್ಕು ನೀರಿನ ಮಾದರಿಗಳಲ್ಲಿ ಹೆಚ್-2 ಎಸ್ ಪರೀಕ್ಷಾ ವಿಧಾನದಿಂದ ತಿಳಿದುಬಂದಂತೆ ಕುಡಿಯಲು ನೀರು ಯೋಗ್ಯವಾಗಿಲ್ಲ ಎಂಬುದಾಗಿ ಜಿಲ್ಲಾ ಸರ್ವೇಕ್ಷಣಾ ಘಟಕ ವರದಿ ನೀಡಿದ್ದು, ಮೇಲ್ನೋಟಕ್ಕೆ ಚಿತ್ರದುರ್ಗ ನಗರಸಭೆಯ ಸಹಾಯಕ ಕಾರ್ಯಪಾಲಕ ಅಭಿಯಂತರ ಮಂಜುನಾಥ್ ಆರ್ ಗಿರಡ್ಡಿ ಹಾಗೂ ಕಿರಿಯ ಅಭಿಯಂತರ ಎಸ್. ಆರ್. ಕಿರಣ್ ಕುಮಾರ್ ಅವರ ಕರ್ತವ್ಯದಲ್ಲಿ ನಿರ್ಲಕ್ಷ್ಯತೆ ಕಂಡುಬಂದಿರುವುದರಿಂದ, ಇವರನ್ನು ಅಮಾನತುಗೊಳಿಸಿ, ಇಲಾಖಾ ವಿಚಾರಣೆಗೆ ಆದೇಶ ಮಾಡುವಂತೆ ಸರ್ಕಾರಕ್ಕೆ ಶಿಫಾರಸು ಮಾಡಲಾಗಿದೆ. ಕವಾಡಿಗರ ಹಟ್ಟಿ ಪ್ರದೇಶಕ್ಕೆ ಓವರ್ ಹೆಡ್ ಟ್ಯಾಂಕ್‌ನಿಂದ ವಾಲ್ವ್ ಆಪರೇಟ್ ಮಾಡಿ ಪೈಪ್‌ಲೈನ್‌ಗೆ ನೀರು ಬಿಡುವ ಆಪರೇಟರ್, ನೀರು ಸರಬರಾಜು ಸಹಾಯಕ ಸಿ.ಹೆಚ್. ಪ್ರಕಾಶ್ ಬಾಬು ಅವರನ್ನು ಸೇವೆಯಿಂದ ಅಮಾನತುಗೊಳಿಸಲಾಗಿದೆ. ಹಾಗೂ ಇಬ್ಬರು ಹೊರಮೂಲ ಆಧಾರದ ಮೇಲೆ ಸೇವೆ ಸಲ್ಲಿಸುತ್ತಿದ್ದ ವಾಲ್ವ್ ಮ್ಯಾನ್‌ಗಳನ್ನು ಸೇವೆಯಿಂದ ತೆಗೆದುಹಾಕಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ತಿಳಿಸಿದ್ದಾರೆ.

# ಪಠ್ಯದ ಜೊತೆಗೆ ಸಂಸ್ಕಾರದ ಜ್ಞಾನ ನೀಡಿ : ಶಾಸಕ ಬಿ.ಜಿ. ಗೋವಿಂದಪ್ಪ

**ಹೊಸದುರ್ಗ :** ಪಠ್ಯಪುಸ್ತಕಗಳ ಜ್ಞಾನ ಮಕ್ಕಳನ್ನು ಒಳ್ಳೆಯ ವ್ಯಕ್ತಿಯನ್ನಾಗಿ ರೂಪಿಸಿದರೆ, ಸಂಸ್ಕಾರದ ಜ್ಞಾನ ಒಳ್ಳೆಯ ವ್ಯಕ್ತಿತ್ವವನ್ನು ರೂಪಿಸುತ್ತದೆ. ಸಂಸ್ಕಾರವಿದ್ದಾಗ ಮಾತ್ರ, ಸಮಾಜದಲ್ಲಿ ಸತ್ಪ್ರಜೆಯಾಗಿ ಬದುಕಲು ಸಾಧ್ಯ. ಅಕ್ಷರ ಜ್ಞಾನವಿದ್ದು, ಸಂಸ್ಕಾರ ಇಲ್ಲದಿದ್ದರೆ ಒಳ್ಳೆಯ ವ್ಯಕ್ತಿತ್ವ ರೂಪುಗೊಳ್ಳಲು ಸಾಧ್ಯವಿಲ್ಲ. ವಿದ್ಯೆಗೆ ವಿನಯವೇ ಭೂಷಣ. ವಿದ್ಯಾರ್ಥಿಗಳಿಗೆ ಪಠ್ಯದ ಜೊತೆಗೆ ಒಳ್ಳೆಯ ಸಂಸ್ಕಾರದ ಜ್ಞಾನವನ್ನು ನೀಡಿ ಎಂದು ಶಿಕ್ಷಕರಿಗೆ ಶಾಸಕ ಬಿ.ಜಿ.ಗೋವಿಂದಪ್ಪ ಸಲಹೆ ನೀಡಿದರು.

ತಾಲೂಕಿನ ಶ್ರೀರಾಂಪುರ ಹೋಬಳಿಯ ನಾಯಿಗೆರೆ ಗ್ರಾಮದ ಸಮೀಪವಿರುವ ಮುರಾರ್ಜಿ ವಸತಿ ಶಾಲೆ ಹಾಗೂ ಮಾಳಪ್ಪನಹಳ್ಳಿ ಸಮೀಪವಿರುವ ಮುರಾರ್ಜಿ ವಸತಿ ಶಾಲೆಗೆ ಗುರುವಾರ ಭೇಟಿ ನೀಡಿ ಮಕ್ಕಳ ಕುಂದು ಕೊರತೆ, ಶಾಲಾ ತರಗತಿಗಳು ಮತ್ತು ವಿದ್ಯಾರ್ಥಿ ನಿಲಯಗಳಲ್ಲಿನ ನ್ಯೂನ್ಯತೆಗಳನ್ನು ಪರಿಶೀಲಿಸಿ, ಶಿಕ್ಷಕರು ಮತ್ತು ನಿಲಯ ಪಾಲಕರೊಂದಿಗೆ ಸಮಸ್ಯೆಗಳ ಕುರಿತಾಗಿ ಚರ್ಚೆ ನಡೆಸಿದರು.

ನಾಯಿಗೆರೆ ಶಾಲೆಯಲ್ಲಿನ ವ್ಯವಸ್ಥೆಯನ್ನು ಪರಿಶೀಲಿಸಿ ನಂತರ ಮಾತನಾಡಿದ ಶಾಸಕರು, ಇಲ್ಲಿನ ಮುರಾರ್ಜಿ ಶಾಲೆಯು ಅವ್ಯವಸ್ಥೆಯಿಂದ ಕೂಡಿದೆ. ಬೋಧಕರಿಗೆ ಇಲ್ಲಿಯೇ ಉಳಿದುಕೊಳ್ಳಲು ಬೋಧಕರ ಕ್ವಾಟ್ರಸ್ ಇದ್ದರೂ, ಶಿಕ್ಷಕರು ಇಲ್ಲಿ ಇರುತ್ತಿಲ್ಲವೆಂಬ ಸಾಕಷ್ಟು ದೂರುಗಳು ಬಂದಿವೆ. ನಿಮ್ಮ ತಪ್ಪುಗಳನ್ನು ತಿದ್ದಿಕೊಳ್ಳಿ, ಮುಂದಿನ ವಾರ ಪುನಃ ಪರಿಶೀಲನೆಗೆ ಬರುತ್ತೇನೆ. ಯಾವುದೇ ಸುಧಾರಣೆ ಕಾಣದಿದ್ದಲ್ಲಿ ಸರ್ಕಾರದ ಗಮನ ಸೆಳೆದು, ಅಲ್ಲಿಯೇ ಸೂಕ್ತ ನಿರ್ಧಾರ ಕೈಗೊಳ್ಳಲಾಗುವುದು ಶಿಕ್ಷಕರಿಗೆ ಎಚ್ಚರಿಕೆ ನೀಡಿದರು.



ಮಾಳಪ್ಪನಹಳ್ಳಿ ಮುರಾರ್ಜಿ ಶಾಲೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಇಲ್ಲಿನ ಪ್ರಾಂಶುಪಾಲೆ ಜ್ಯೋತಿ ಮಾತನಾಡುತ್ತಾ, ಶಿಕ್ಷಕರಿಗೆ ಶಾಲಾ ಆವರಣದಲ್ಲಿ ಕ್ವಾಟ್ರಸ್ ಸೌಲಭ್ಯ ಇಲ್ಲದ ಕಾರಣ, ಇಲ್ಲಿ ಯಾರು ಉಳಿದುಕೊಳ್ಳುವುದಿಲ್ಲ. ದಿನಕ್ಕೆ ಒಬ್ಬರಂತೆ ಕಾವಲುಗಾರರನ್ನು ನೇಮಿಸಲಾಗುತ್ತಿದೆ. ಮಕ್ಕಳಿಗೆ ಮಲಗಲು ಹಾಸಿಗೆ ಇಲ್ಲ. ಕುಳಿತು ಪಾಠ ಕೇಳಲು ಬೆಂಚ್ಗಳಿಲ್ಲ. ಚಳಿಗಾಲದಲ್ಲಿಯೂ ಕೂಡ ಮಕ್ಕಳು ನೆಲದ ಮೇಲೆ ಮಲಗುವುದರಿಂದ ಅನಾರೋಗ್ಯದ ಸಮಸ್ಯೆ ಉಂಟಾಗುತ್ತಿದೆ ಎಂದು ಇನ್ನೂ ಹಲವು ಸಮಸ್ಯೆಗಳ ಸರಮಾಲೆಗಳನ್ನು ಶಾಸಕರ ಎದುರು ಬಿಚ್ಚಿಟ್ಟರು.

ಇದಕ್ಕೆ ಪ್ರತಿಕ್ರಿಯಿಸಿ ಶಾಸಕ ಬಿ.ಜಿ.ಗೋವಿಂದಪ್ಪ ಮಾತನಾಡಿ, ನಾನು ಶಾಸಕನಾಗಿದ್ದ ಅವಧಿಯಲ್ಲಿ ಶಾಲೆಗಳಲ್ಲಿ ಆಗಿದ್ದ ಅಭಿವೃದ್ಧಿ ಕಾರ್ಯಗಳನ್ನು ಬಿಟ್ಟರೆ, ಕಳೆದ 5 ವರ್ಷದಲ್ಲಿ ಯಾವುದೇ ಅಭಿವೃದ್ಧಿ ಕೆಲಸಗಳು ಆಗಿಲ್ಲ. ಈ ವಿಷಯದ ಕುರಿತಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಚಿವರೊಂದಿಗೆ ಚರ್ಚೆ ನಡೆಸಿ, ಕ್ರಮ ಕೈಗೊಳ್ಳಲಾಗುವುದು. ಆದರೆ, ಶಿಕ್ಷಕರಾದ ನೀವುಗಳು ವಿದ್ಯಾರ್ಥಿಗಳಿಗೆ ಪಾಠ ಭೋದಿಸುವ ವಿಷಯದಲ್ಲಿ ಹಿಂದೆ ಸರಿಯದೆ, ಪ್ರಾಮಾಣಿಕವಾಗಿ ಕೆಲಸ ಮಾಡಿ ಎಂದು ಸೂಚನೆ ನೀಡಿದರು.

# ಇಂದ್ರಧನುಷ್ 5.0 ಲಸಿಕೆ ಅಭಿಯಾನ

**ಚಿತ್ರದುರ್ಗ :** ಜಿಲ್ಲೆಯಾದ್ಯಂತ ಮಾರಕ ರೋಗಗಳ ವಿರುದ್ಧ ನೀಡುವ ಲಸಿಕೆಗಳಿಂದ ವಂಚಿತರಾದಂತಹ ಐದು ವರ್ಷದೊಳಗಿನ ಎಲ್ಲ ಮಕ್ಕಳು ಹಾಗೂ ಗರ್ಭಿಣಿಯರಿಗೆ ಬಿಟ್ಟುಹೋದ ಲಸಿಕೆಗಳನ್ನು ಪೂರ್ಣಗೊಳಿಸಲು ಪರಿಣಾಮಕಾರಿ ಮಿಷನ್ ಇಂದ್ರಧನುಷ್ 5.0 ಅಭಿಯಾನ ಆಯೋಜಿಸಿದೆ ಎಂದು ಆರ್‌ಸಿಹೆಚ್ ಅಧಿಕಾರಿ ಡಾ.ರೇಣುಪ್ರಸಾದ್ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಪರಿಣಾಮಕಾರಿ ಮಿಷನ್ ಇಂದ್ರಧನುಷ್-5.0 ಲಸಿಕಾ ಕಾರ್ಯಕ್ರಮದ ಜಿಲ್ಲಾಮಟ್ಟದ ಟಾಸ್ಕ್‌ಫೋರ್ಸ್ ಸಮಿತಿ ಸಭೆಯಲ್ಲಿ ಅವರು ಮಾತನಾಡಿದರು. ಲಸಿಕಾ ಅಭಿಯಾನವು 3 ಸುತ್ತುಗಳಲ್ಲಿ ನಡೆಯಲಿದೆ. ಇದೇ ಆಗಸ್ಟ್ 7 ರಿಂದ 12 ರವರೆಗೆ, ಸೆಪ್ಟೆಂಬರ್ 11 ರಿಂದ 16 ರವರೆಗೆ ಮತ್ತು ಅಕ್ಟೋಬರ್ 9 ರಿಂದ 14 ರವರೆಗೆ ನಡೆಯಲಿದ್ದು, ಪ್ರತಿ ತಿಂಗಳಲ್ಲಿ ಆರು ದಿನ ಲಸಿಕಾ ಪ್ರಕ್ರಿಯೆ ನಡೆಯಲಿದೆ ಎಂದು ತಿಳಿಸಿದರು.

ಜಿಲ್ಲೆಯ ಆರು ತಾಲ್ಲೂಕುಗಳಲ್ಲಿ ಈಗಾಗಲೇ ಹೆಡ್‌ಕೌಂಟ್ (ತಲೆ ಎಣಿಕೆ) ಸಮೀಕ್ಷೆಯ ಮೂಲಕ ಲಸಿಕೆಯಿಂದ ವಂಚಿತರಾದ ಫಲಾನುಭವಿಗಳನ್ನು ಗುರುತಿಸಿ ಪಟ್ಟಿ ತಯಾರಿಸಿ, ಕ್ರಿಯಾಯೋಜನೆ ರೂಪಿಸಲಾಗಿದೆ. ಶಿಕ್ಷಣ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಮಕ್ಕಳ ಮೊಬೈಲೇಜೇಶನ್ ಆಗಬೇಕು. ಯಾವುದೇ ಮಗು ಲಸಿಕೆಯಿಂದ ವಂಚಿತರಾಗದಂತೆ ಅಗತ್ಯ ಕ್ರಮವಹಿಸಬೇಕು ಎಂದು ಹೇಳಿದರು.

ಇಂದ್ರಧನುಷ್ ಲಸಿಕಾ ಅಭಿಯಾನವನ್ನು ತೀವ್ರ ತರನಾಗಿ ಕೈಗೊಳ್ಳಲು ಜಿಲ್ಲೆಯಲ್ಲಿ ಈಗಾಗಲೇ ಸಿದ್ದತೆ ಕೈಗೊಳ್ಳಲಾಗಿದೆ. 900 ಗರ್ಭಿಣಿಯರು, 2 ವರ್ಷದ ಒಳಗಿನ 3418 ಮಕ್ಕಳು, 2 ರಿಂದ 5 ವರ್ಷ ಒಳಗಿನ 57 ಮಕ್ಕಳಿಗೆ ಲಸಿಕೆ ನೀಡಲಾಗುವುದು. ಸಂಚಾರಿ ಸೇರಿದಂತೆ 681 ಲಸಿಕಾಕರಣ ಕೈಗೊಳ್ಳಲಾಗುವುದು ಎಂದು ಮಾಹಿತಿ ನೀಡಿದರು.



ಚಿತ್ರದುರ್ಗ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ಪರಿಣಾಮಕಾರಿ ಮಿಷನ್ ಇಂದ್ರಧನುಷ್-5.0 ಲಸಿಕಾ ಕಾರ್ಯಕ್ರಮದ ಪೋಸ್ಟರ್ ಬಿಡುಗಡೆ ಮಾಡಲಾಯಿತು.

ಜಿಲ್ಲೆಯ ಮಕ್ಕಳ ತಜ್ಞರು ಹೆಚ್ಚಿನ ನಿಗಾ ವಹಿಸಿ ಮಕ್ಕಳ ಆರೋಗ್ಯ ತಪಾಸಣೆ ನಡೆಸುತ್ತಿದ್ದಾರೆ. 398 ದಡರಾ ಹಾಗೂ ರುಬೆಲ್ಲಾ (ದದ್ದು ಹಾಗೂ ದಡಾರ) ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ. ಇವುಗಳಿಗೆ ಸೂಕ್ತ ಚಿಕಿತ್ಸೆ ಸಹ ನೀಡಲಾಗುತ್ತಿದೆ ಎಂದರು.

ಡಬ್ಲ್ಯೂಹೆಚ್‌ಒ ಸಮಾಲೋಚಕ ಶ್ರೀಧರ್ ಮಾತನಾಡಿ, ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದಡಿಯಲ್ಲಿ 12 ಮಾರಕ ರೋಗಗಳ ವಿರುದ್ಧ ಲಸಿಕೆ ನೀಡಲಾಗುತ್ತಿದೆ. ನಮ್ಮ ದೇಶ ಈಗಾಗಲೇ ಪೋಲೀಯೋ ಮುಕ್ತವಾಗಿದೆ. 2023ರ ಡಿಸೆಂಬರ್ ಅಂತ್ಯದೊಳಗೆ ದಡಾರ ಮತ್ತು ರುಬೆಲ್ಲಾ ರೋಗಗಳ ನಿರ್ಮೂಲನೆ ಮಾಡುವ ಗುರಿ ಇದೆ. ಇಂದ್ರಧನುಷ್ 5.0 ಪರಿಣಾಮಕಾರಿ ಅನುಷ್ಠಾನಕ್ಕೆ ಅಗತ್ಯ ಕ್ರಮವಹಿಸಬೇಕು ಎಂದರು.

ಜಿಲ್ಲಾಮಟ್ಟದಲ್ಲಿ ಮಾತ್ರ ಸೀಮಿತವಾಗದೇ ಇನ್ನೂ ಮುಂದೆ ಪ್ರತಿ 15 ದಿನಕ್ಕೊಮ್ಮೆ ತಾಲ್ಲೂಕುಮಟ್ಟದಲ್ಲಿ ತಹಶೀಲ್ದಾರ್ ಅಧ್ಯಕ್ಷತೆಯಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿಗಳು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಹಾಗೂ ಶಿಕ್ಷಣ ಇಲಾಖೆ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ಯಾವ ರೀತಿಯಲ್ಲಿ ದಡಾರ ಮತ್ತು ರುಬೆಲ್ಲಾ ರೋಗ ನಿರ್ಮೂಲನೆಗೆ ಕಾರ್ಯತತ್ಪರಾಗಬೇಕು ಎಂಬುವುದರ ಕುರಿತು ಪ್ರಗತಿ ಪರಿಶೀಲನೆ ನಡೆಸಿ, ಜಿಲ್ಲಾಮಟ್ಟಕ್ಕೆ ವರದಿ ಸಲ್ಲಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಸಿ.ಒ.ಸುಧಾ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಪಿ.ಲೋಕೇಶ್ವರಪ್ಪ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣನಾಯ್ಕ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಸೇರಿದಂತೆ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಶಿಕ್ಷಣ ಇಲಾಖೆ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ಫಾಸ್ಟ್ ನ್ಯೂಸ್

## ಆನ್‌ಲೈನ್ ಮೂಲಕ ಅರ್ಜಿ ಅಹ್ವಾನ

**ಚಿತ್ರದುರ್ಗ** : 2023–24ನೇ ಸಾಲಿನ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಡಿ 8 ಯೋಜನೆಗಳಿಗೆ ಸುವಿಧಾ ತಂತ್ರಾಂಶದಡಿ ಅನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಆಗಸ್ಟ್ 31 ದಿನ ಆಗಿರುತ್ತದೆ.

ಫಲಾನುಭವಿ ಆಧಾರಿತ ಯೋಜನೆಗಳ ಹೆಸರು: ಆಧಾರ ಯೋಜನೆ, ಮೆರಿಟ್ ವಿದ್ಯಾರ್ಥಿಗಳಿಗಾಗಿ ಪ್ರೋತ್ಸಾಹಧನ ಯೋಜನೆ, ಮರಣ ಪರಿಹಾರ ನಿಧಿ (ಎಂಆರ್‌ಡಬ್ಲ್ಯೂ, ವಿಆರ್‌ಡಬ್ಲ್ಯೂ), ವೈದ್ಯಕೀಯ ಪರಿಹಾರ ನಿಧಿ, ನಿರುದ್ಯೋಗ ಭತ್ಯೆ, ಪ್ರತಿಭೆ ಯೋಜನೆ, ಸಾಧನೆ ಯೋಜನೆ, ಶಿಶುಪಾಲನಾ ಭತ್ಯೆ ಯೋಜನೆಗಳಿಗೆ ಇಲಾಖೆಯ ವೆಬ್‌ಸೈಟ್ **https://sevasindhu.karnataka.gov.in/sevasindhu/departmentservice** ನಲ್ಲಿ ನಿಗದಿತ ನಮೂನೆಯಲ್ಲಿ ಅಗತ್ಯ ದಾಖಲಾತಿಯೊಂದಿಗೆ ಅರ್ಜಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸಿದ ಒಂದು ಹಾರ್ಡ ಪ್ರತಿಯನ್ನು ಆಯಾ ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿರುವ ವಿವಿದೊದ್ದೇಶ ಪುನರ್ವಸತಿ ಕಾರ್ಯಕರ್ತರುಗಳಿಗೆ ಸಲ್ಲಿಸಬೇಕು.

ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿದೊದ್ದೇಶ ಪುನರ್ವಸತಿ ಕಾರ್ಯಕರ್ತರ ದೂರವಾಣಿ ಸಂಖ್ಯೆ ಚಿತ್ರದುರ್ಗ–9880821934, ಚಳ್ಳಕೆರೆ–9611266930, ಹಿರಿಯೂರು–9902888901, 9902898901, ಹೊಳಲ್ಕೆರೆ–9740030227, ಹೊಸದುರ್ಗ–9741829990, ಮೊಳಕಾಲ್ಮೂರು–9742725576 ಗೆ ಸಂಪರ್ಕಿಬಹುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ, ಭಾಲಭವನ ಆವರಣ, ಸ್ಟೇಡಿಯಂ ಹತ್ತಿರ, ಚಿತ್ರದುರ್ಗ ದೂರವಾಣಿ ಸಂಖ್ಯೆ 08194–235282 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪತ್ರಿಕಾ ದಿನಾಚರಣೆ – ಪತ್ರಕರ್ತರಿಗೆ ಕಾರ್ಯಗಾರ

**ದಾವಣಗೆರೆ** : ದಾವಣಗೆರೆ ವಿಶ್ವವಿದ್ಯಾನಿಲಯದ ಆಶ್ರಯದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ದಾವಣಗೆರೆ ಹಾಗೂ ಚಿತ್ರದುರ್ಗ ಜಿಲ್ಲಾ ಘಟಕ ಮತ್ತು ದಾವಣಗೆರೆ ಜಿಲ್ಲಾ ವರದಿಗಾರರ ಕೂಟದ ಸಹಯೋಗದಲ್ಲಿ ಪತ್ರಿಕಾ ದಿನಾಚರಣೆ ಹಾಗೂ ಪತ್ರಕರ್ತರಿಗೆ ಕಾರ್ಯಗಾರವನ್ನು ದಿನಾಂಕ 05–08–2023ರ ಶನಿವಾರ ಬೆಳಿಗ್ಗೆ 10–30 ಕ್ಕೆ ದಾವಣಗೆರೆ ವಿಶ್ವವಿದ್ಯಾನಿಲಯದ ಶಿವಗಂಗೋತ್ರಿ ಯ ಎಂಬಿಎ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ದಾವಣಗೆರೆ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಇ. ಎಂ. ಮಂಜುನಾಥ್ ತಿಳಿಸಿದ್ದಾರೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಕೊಪ್ಪಳ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊಫೆಸರ್ ಬಿ.ಕೆ ರವಿ ನೆರವೇರಿಸಲಿದ್ದು. ಅಧ್ಯಕ್ಷತೆಯನ್ನು ದಾವಣಗೆರೆ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ|| ಬಿ. ಟಿ. ಕುಂಬಾರ ವಹಿಸಲಿದ್ದಾರೆ.

ಡಿಜಿಟಲ್ ಯುಗದಲ್ಲಿ ಪತ್ರಕರ್ತರ ಭವಿಷ್ಯ ಎಂಬ ವಿಷಯದ ಬಗ್ಗೆ ವಿಶೇಷ ಉಪನ್ಯಾಸವನ್ನು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ .ವಿ. ಪ್ರಭಾಕರ್ ನೀಡಲಿದ್ದಾರೆ. ಗ್ರಾಮೀಣ ಪತ್ರಕರ್ತರ ಸಮಸ್ಯೆಗಳು ಮತ್ತು ಪರಿಹಾರ ಮಾರ್ಗಗಳು ಎಂಬ ವಿಷಯದ ಬಗ್ಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಮಾತನಾಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಪತ್ರಕರ್ತರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ. ಲೋಕೇಶ್ ಆಗಮಿಸಲಿದ್ದಾರೆ ಎಂದು ಜಿಲ್ಲಾ ಕಾರ್ಯ ನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಎ. ಫಕೃದ್ದೀನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಾರ್ಯಕ್ರಮದಲ್ಲಿ ಕುಲಸಚಿವರಾದ ಶ್ರೀಮತಿ ಸರೋಜಾ ಬಿ. ಬಿ, ಡಾ. ಶಿವಶಂಕರ್. ಕೆ, ಹಣಕಾಸು ಅಧಿಕಾರಿ ಪ್ರೊ|| ಶಶಿಧರ್. ಆರ್ ,ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ದಾವಣಗೆರೆ ಜಿಲ್ಲಾಧ್ಯಕ್ಷ ಇ. ಎಂ.ಮಂಜುನಾಥ್ ,ಚಿತ್ರದುರ್ಗ ಜಿಲ್ಲಾಧ್ಯಕ್ಷ, ಬಿ .ದಿನೇಶ್ ಗೌಡಗೆರೆ , ದಾವಣಗೆರೆ ಜಿಲ್ಲಾ ವರದಿಗಾರರ ಕೂಟದ ಅಧ್ಯಕ್ಷ ಕೆ. ಏಕಾಂತಪ್ಪ, ಪತ್ರಕರ್ತರ ಸಂಘದ ದಾವಣಗೆರೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎ. ಫಕೃದ್ದೀನ್, ಚಿತ್ರದುರ್ಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಸ್. ಸಿದ್ದರಾಜು, ವರದಿಗಾರರ ಕೂಟದ ಪ್ರಧಾನ ಕಾರ್ಯದರ್ಶಿ ಡಾ. ವರದರಾಜ್, ಉಪಸ್ಥಿತರಿರುವರು ಎಂದು ಜಿಲ್ಲಾ ಖಜಾಂಚಿ ಎನ್. ವಿ.ಬದರಿನಾಥ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಕಾರ್ಯಾಗಾರದಲ್ಲಿ ಭಾಗವಹಿಸಲು ಇಚ್ಚಿಸುವ ಪತ್ರಕರ್ತರು ಹೆಚ್ಚಿನ ಮಾಹಿತಿಗಾಗಿ 8660305128, 8494949909, 8618063304, 9844377451, 9945549009 ಸಂಪರ್ಕಿಸಲು ಕೋರಲಾಗಿದೆ.

## ಆಟೋದಲ್ಲಿ ಅನ್ಯಕೋಮಿ ಚಾಲಕನ ಮೇಲೆ ಹಲ್ಲೆ

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನೈತಿಕ ಪೊಲೀಸ್?ಗಿರಿ ಮುಂದುವರಿದಿದೆ. ಬೆಳ್ತಂಗಡಿ ತಾಲೂಕಿನ ಧರ್ಮಸ್ಥಳದ ಬಸ್ ನಿಲ್ದಾಣದಲ್ಲಿ ನಿನ್ನೆ ರಾತ್ರಿ ಆಟೋ ಚಾಲಕನ ಮೇಲೆ ಹಲ್ಲೆ ನಡೆಸಲಾಗಿದೆ.

ಆಟೋದಲ್ಲಿ ಯುವತಿಯನ್ನು ಕೂರಿಸಿಕೊಂಡು ಹೋಗ್ತಿದ್ದಾಗ ಉಜಿರೆ ನಿವಾಸಿ ಮೊಹಮ್ಮದ್ ಆಶಿಕ್(22) ಮೇಲೆ ಹಲ್ಲೆ ನಡೆಸಲಾಗಿದೆ. ಧರ್ಮಸ್ಥಳ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ನಗರಸಭೆ ಪೌರಾಯುಕ್ತ ಮತ್ತು ಬಿಲ್ ಕಲೆಕ್ಟರ್ ಅಧಿಕಾರಿಗಳು ಲೋಕಾಯುಕ್ತ ಬಲೆಗೆ

**ಚಳ್ಳಕೆರೆ** : ಚಳ್ಳಕೆರೆ ನಗರಸಭೆಯ ಪೌರಾಯುಕ್ತರಾಗಿ ಮೂರನೇ ಬಾರಿಗೆ ಕಳೆದ ತಿಂಗಳಷ್ಟೇ ಅಧಿಕಾರ ಸ್ವೀಕರಿಸಿದ್ದ ಟಿ.ಲೀಲಾವತಿ ಮತ್ತು ಬಿಲ್ ಕಲೆಕ್ಟರ್ ನಿಶಾನಿಕಾಂತರಾಜ್ ನಗರದ ವ್ಯಕ್ತಿಯೊಬ್ಬರ ನಿವೇಶನ ಖಾತೆ ಮಾಡಿಕೊಡಲು ಮೂರು ಲಕ್ಷ ಹಣದ ಬೇಡಿಕೆ ಇಟ್ಟು, ಹಣ ಪಡೆಯುವ ಸಂದರ್ಭದಲ್ಲೇ ಲೋಕಾಯುಕ್ತ ಪೊಲೀಸರ ಬಲೆಗೆ ಬಿದಿದ್ದಾರೆ. ಲೋಕಾಯುಕ್ತರು ದಾಳಿ ನಡೆಸಿದ ಸಂದರ್ಭದಲ್ಲಿ ನಿಶಾನಿ ಕಾಂತರಾಜ ಲೋಕಾಯುಕ್ತ ಪೊಲೀಸರಿಗೆ ಕೈಕೊಟ್ಟು ಕಚೇರಿಯಿಂದ ಓಡಿ ಹೋಗಿದ್ದ ಆದರೂ ಪೊಲೀಸರು ಆತನನ್ನು ಬೆನ್ನತ್ತಿ ಬೆಂಗಳೂರು ರಸ್ತೆಯ ಡಾಬಾದ ಬಳಿ ಈತನನ್ನು ವಶಕ್ಕೆ ಪಡೆದಿದ್ದಾರೆ.



ಟಿ.ಲೀಲಾವತಿ

ನಗರದ ಗಾಂಧಿನಗರ ನಿವಾಸಿ ಕಾಳಿಕಾಂಬ ಜ್ಯೂವೆಲರಿ ಮಾಲೀಕ ನಿವೇಶನದ ಸಂಬಂಧ ಖಾತೆ, ಇ–ಸ್ವತ್ತು, ಮಾಡಿಕೊಡುವಂತೆ ಹಲವಾರಿ ಭಾರಿ ಅಲೆದಾಡಿದ್ದು ಪೌರಾಯುಕ್ತರು ಮತ್ತು ಸಂಬಂಧಪಟ್ಟ ದ್ವಿತಿಯ ದರ್ಜೆ ಸಹಾಯಕರನ್ನು ಭೇಟಿ ಮಾಡಿದಾಗ ಮೂರು ಲಕ್ಷ ಹಣ ನೀಡಿದರೆ ಮಾತ್ರ ಖಾತೆಯೊಂದಿಗೆ ಇ–ಸ್ವತ್ತು ಮಾಡಿ ಕೊಡುವುದಾಗಿ ತಿಳಿಸಿದ್ದಾರೆ. ಇಲ್ಲಿನ ನಗರಸಭೆಗೆ ಮಧ್ಯಾಹ್ನ ಸಂದರ್ಭ ದಲ್ಲಿ ಲೋಕಾಯುಕ್ತರ ದಾಳಿ ನಡೆಸಿದ್ದು ತಿಳಿದ ಕಚೇರಿ ಸಿಬ್ಬಂದಿ ತಲ್ಲಣಗೊಂಡಿದ್ದರು. ಕಚೇರಿಯಲ್ಲಿದ್ದ ಎಲ್ಲಾ ಸಿಬ್ಬಂದಿಯವರ ಮುಖದಲ್ಲಿ ಭಯದ ವಾತಾವಣವಿತ್ತು. ನಗರಸಭೆ ಸದಸ್ಯರು, ಸಾರ್ವಜನಿಕರು, ವಿವಿಧ ಇಲಾಖೆಯ ಅಧಿಕಾರಿಗಳು ನಗರಸಭೆಯತ್ತ ದಾವಿಸಿಬಂದರು.

ಇನ್ಸ್‌ಪೆಕ್ಟರ್ ರಾಜ ಫಕೃದ್ದೀನ್ ದೇಸಾಯಿ, ತಳಕು ಇನ್ಸ್‌ಪೆಕ್ಟರ್ ಕೆ.ಸಮೀವುಲ್ಲಾ, ಪಿಎಸ್‌ಐ ಕೆ.ಸತೀಶ್ ನಾಯ್ಕ ಕಚೇರಿಗೆ ಹೊರಭಾಗದಲ್ಲಿ ಸಾರ್ವಜನಿಕರು ಒಳ ಪ್ರವೇಶದಂತೆ ಭದ್ರತೆ ಒದಗಿಸಿದರು.

ಖಾತೆ ಮಾಡಿಕೊಳ್ಳಲು ನಗರಸಭೆಗೆ ಅಲೆದಾಡಿ ರೋಸಿದ್ದ ನಾಗರಾಜಚಾರ್ ತಡಮಾಡದೆ ಕೂಡಲೇ ಲೋಕಾಯುಕ್ತರ ಗಮನಕ್ಕೆ ತಂದಿದ್ದಾನೆ. ನಾಗರಾಜರವರು ನೀಡಿದ ಮಾಹಿತಿಯನ್ನು ಅನುಸರಿಸಿ ಗುರುವಾರ ಮಧ್ಯಾಹ್ನ 4ರ ಸಮಯದಲ್ಲಿ ನಗರಸಭೆಯ ಪೌರಾಯುಕ್ತರ ಕೊಠಡಿಯಲ್ಲೇ ಪೌರಾಯುಕ್ತೆ ಟಿ.ಲೀಲಾವತಿ ರೆಡ್‌ಹ್ಯಾಂಡ್ ಸಿಕ್ಕಿಬಿದ್ದಿದ್ದಾರೆ. ಲೋಕಾಯುಕ್ತ ಎಸ್ಪಿ ವಾಸು ದೇವರಾವ್ ನೇತೃತ್ವದಲ್ಲಿ ಲೋಕಾಯುಕ್ತ ಇನ್ಸ್‌ಪೆಕ್ಟರ್‌ಗಳಾದ ಬಿ.ಕೆ.ಲತಾ, ಶಿಲ್ಪ, ವಸಂತಕುಮಾರ್, ಸಿಬ್ಬಂದಿಯಾದ ತಿಪ್ಪೇಸ್ವಾಮಿ, ಶ್ರೀನಿವಾಸ್, ಸಂತೋಷ ಮುಂತಾದವರು ದಾಳಿ ನಡೆಸಿದರು.



ನಿಶಾನಿ ಕಾಂತರಾಜ

# ಉತ್ತಮ ಸಮಾಜಕ್ಕೆ ಪತ್ರಕರ್ತರ ಸೇವೆ ಅಮೂಲ್ಯವಾದದ್ದು : ಎನ್.ವೈ.ಜಿ

**ಮೊಳಕಾಲ್ಮುರು** : ಉತ್ತಮ ಸಮಾಜದ ನಿರ್ಮಾಣಕ್ಕೆ ಮತ್ತು ಅರೋಗ್ಯ ಪೂರ್ಣ ಸ್ವಾಸ್ತ್ಯ ಸಮಾಜದ ನಿರ್ಮಾಣಕ್ಕೆ ಪತ್ರಕರ್ತರ ಸೇವೆ ಅತ್ಯಂತ ಅಮೂಲ್ಯವಾದ ಸೇವೆಯಾಗಿದೆ ಎಂದು ಶಾಸಕರಾದ ಎನ್. ವೈ. ಗೋಪಾಲಕೃಷ್ಣ ತಿಳಿಸಿದರು

ಮೊಳಕಾಲ್ಮುರು ಪಟ್ಟಣದ ಗುರುಭವನದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಪತ್ರಿಕಾ ದಿನಾಚರಣೆಯ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು

ರಾಜ್ಯ, ದೇಶ, ವಿದೇಶಗಳಲ್ಲಿ ನಡೆಯುವಂತಹ ಘಟನಾ ವಳಿಗಳನ್ನು ಸಮಾಜದ ಪ್ರತಿಯೊಬ್ಬ ನಾಗರಿಕನಿಗೂ ತಿಳಿಸುವಂತಹ ಸೇವೆಯನ್ನು ಪತ್ರಕರ್ತರು ನಿರ್ವಹಿಸುತ್ತಿದ್ದು ಸಮಾಜ ಮತ್ತು ಸಮುದಾಯಗಳ ಅಭಿವೃದ್ಧಿಗಾಗಿ ಪತ್ರಕರ್ತರ ಸೇವೆ ಅಮೂಲ್ಯವಾದ ಸೇವೆಯಾಗಿದೆ ಎಂದು ತಿಳಿಸಿದರು

ಉತ್ತಮ ಸಮಾಜದ ನಿರ್ಮಾಣಕ್ಕೆ ಸಂವಿಧಾನದ ಬದ್ದವಾದ ನ್ಯಾಯಾಂಗ, ಶಾಸಕಾಂಗ, ಕಾರ್ಯಾಂಗ ಎಷ್ಟು ಮಹತ್ವವವೂ ಪತ್ರಿಕಾಂಗವು ಅಷ್ಟೆ ಮುಖ್ಯವಾಗಿದೆ

ಸಮಾಜದ ಸ್ಥಿತಿಗತಿಗಳನ್ನು ತಿಳಿಯಲು ಮತ್ತು ಉತ್ತಮ ಸಮಾಜದ ನಿರ್ಮಾಣಕ್ಕೆ ಪೂರಕವಾದ ಪರಿಹಾರ ಕ್ರಮಗಳನ್ನು ಕೈಗೊಳ್ಳಲು ಪತ್ರಕರ್ತರ ಸೇವೆ ಮಹತ್ವ ಪೂರ್ಣವಾದ ಸೇವೆಯಾಗಿದೆ ಎಂದು ತಿಳಿಸಿದರು

ಆದುನಿಕ ಜಗತ್ತಿನ ವೈಜ್ಞಾನಿಕ ಯುಗದದಲ್ಲಿ ಮಾಧ್ಯಮಗಳಿಂದ ಹೆಚ್ಚಿನ ಮಾಹಿತಿಯನ್ನು ತಿಳಿಯಬಹುದಾಗಿದೆ ಸಮಾಜದಲ್ಲಿನ ಸರಿ ತಪ್ಪುಗಳನ್ನು ಎತ್ತಿಹಿಡಿಯುವ ಮತ್ತು ಪೂರಕ ಪರಿಹಾರವನ್ನು ಪಡೆಯಲು ಮಾಧ್ಯಮಗಳು ಸಹಕಾರಿಯಾಗಿವೆ ಎಂದು ಹೇಳಿದರು

ಉತ್ತಮ ಸಮಾಜದ ನಿರ್ಮಾಣ ಕೇವಲ ಒಬ್ಬರಿಂದ ಮಾತ್ರ ಸಾಧ್ಯವಿಲ್ಲ ಜನಪ್ರತಿನಿದಿಗಳು, ಹೋರಾಟಗಾರರು, ಪತ್ರಕರ್ತರು, ಸಂಘಟನೆಗಳು , ಸಂಘ ಸಂಸ್ಥೆಗಳು ಹಾಗೂ ಸಮಾಜ ಪರ ಚಿಂತಕರು ಎಲ್ಲರೂ ಒಟ್ಟಾಗಿ ಶ್ರಮಿಸಿದಾಗ ಮಾತ್ರ ಅಭಿವೃದ್ಧಿ ಪೂರಕವಾದ ಮಾದರಿ ಸಮಾಜ ನಿರ್ಮಾಣ ಸಾಧ್ಯ ಎಂದು ತಿಳಿಸಿದರು

ರಾಜ್ಯದಲ್ಲಿ ಅತ್ಯಂತ ಹಿಂದುಳಿದ, ಬರಗಾಲ ಪೀಡಿತ, ಗಡಿಭಾಗದ ತಾಲ್ಲೂಕಿನ ಸಮಗ್ರ ಅಭಿವೃದ್ಧಿಗಾಗಿ ಮತ್ತು ನನ್ನ ಜನ್ಮ ಭೂಮಿಯ ಅಭಿವೃದ್ಧಿಗಾಗಿ ಸೇವೆ ಸಲ್ಲಿಸಬೇಕು ಎಂಬ ಮಹದಾಸೆಯಿಂದ ತವರು ಕ್ಷೆತ್ರವನ್ನು ಆಯ್ಕೆ ಮಾಡಿಕೊಂಡಿದ್ದು ಮಹಾ ಜನತೆ ನನಗೆ ಉತ್ತಮ ಮತದಾನ ಮಾಡುವ ಮೂಲಕ ಜಯಶೀಲರನ್ನಾಗಿ ಮಾಡಿದ್ದು ಕ್ಷೆತ್ರದ ನಾಗರಿಕರ ಉತ್ತಮ ಬದುಕಿಗಾಗಿ ಅವಶ್ಯಕವಾದ ಪರಿಹಾರ ಕ್ರಮಗಳನ್ನು ಕೈಗೊಳ್ಳುವ ಮೂಲಕ ಕ್ಷೆತ್ರದ ಸಮಗ್ರ ಅಭಿವೃದ್ಧಿಗೆ ಶ್ರಮಿಸುವುದಾಗಿ ಹೇಳಿದರು



ಮೊಳಕಾಲ್ಮುರು ಪಟ್ಟಣದ ಗುರುಭವನದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಶಾಸಕರಾದ ಎನ್. ವೈ. ಗೋಪಾಲಕೃಷ್ಣ ಉದ್ಘಾಟಿಸಿದರು

ನಾನು ಯಾವುದೆ ರಾಜಕೀಯ ಅಧಿಕಾರಕ್ಕಾಗಿ ಯಾರ ಬಳಿಯು ಕೇಳುವುದಿಲ್ಲ ನನ್ನ ಕ್ಷೆತ್ರದ ಜನರ ಅಭಿವೃದ್ಧಿಗೆ ಶ್ರಮಿಸುವುದು ಮತ್ತು ಅಧಿಕಾರಿಗಳ ಉತ್ತಮ ಸೇವೆಯೊಂದಿಗೆ ಕ್ಷೆತ್ರದ ಸಂಪೂರ್ಣ ಅಭಿವೃದ್ಧಿಗೆ ಸೇವೆಸಲ್ಲಿಸುವುದು ನನ್ನ ಪ್ರಮುಖ ಗುರಿಯಾಗಿದೆ ಎಂದು ತಿಳಿಸಿದರು

ಪತ್ರಕರ್ತರ ಉತ್ತಮ ಸೇವೆಗಾಗಿ ಪತ್ರಕರ್ತರ ಭವನದ ನಿರ್ಮಾಣಕ್ಕೆ ಎಲ್ಲಾ ರೀತಿಯ ಸಹಾಯವನ್ನು ಮಾಡಲಾಗುವುದು ಮತ್ತು ಸಮಾಜದ ಉನ್ನತಿಗಾಗಿ ಶಮಿಸುವ ಕಾರ್ಯಕ್ರಮಗಳಿಗೆ ನನ್ನ ಸಂಪೂರ್ಣ ಸಹಕಾರವಿದೆ ನಮ್ಮೆಲ್ಲ ಸೇವೆ ಸಮಾಜ ಮತ್ತು ಸಮುದಾಯಗಳ ಅಭಿವೃದ್ಧಿಗೆ ಪೂರಕವಾಗಿರಬೇಕು ಎಂದು ಹೇಳಿದರು

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಅಧ್ಯಕ್ಷ ದಿನೇಶ್ ಗೌಡಗೆರೆ ಮಾತನಾಡಿ ಕರ್ನಾಟಕ ಕಾರ್ಯನಿರತ ಪತ್ರಕರ್ತ ಸಂಘದ ಎಲ್ಲಾ ಪತ್ರಕರ್ತರು ತಾಲೂಕಿನಲ್ಲಿ ಉತ್ತಮ ಸೇವೆ ಸಲ್ಲಿಸುತ್ತಿದ್ದು ಉತ್ತಮ ಸಮಾಜ ನಿರ್ಮಾಣಕ್ಕೆ ಪತ್ರಕರ್ತರ ಸೇವೆ ಮಹತ್ವ ಪೂರ್ಣವಾದುದಾಗಿದೆ ಎಂದು ಹೇಳಿದರು

ಪರಮ ಪೂಜ್ಯ ಮ. ನಿ. ಪ್ರ ಬಸವಲಿಂಗ ಸ್ವಾಮಿಗಳು ಮಾತನಾಡಿ ಯಾವುದೆ ಸಮಾಜ ಬದಲಾವಣೆಯಗಳು ಮತ್ತು ಉತ್ತಮ ಅಭಿವೃದ್ಧಿಯನ್ನು ಸಾದಿಸಲು ಎಲ್ಲರೂ ಒಟ್ಟಾಗಿ ಶ್ರಮಿಸಬೇಕು ಅಂತಹ ಸೇವೆಯಲ್ಲಿ ಪತ್ರಕರ್ತರ ಸೇವೆ ಅತ್ಯಾವಶಕವಾಗಿದೆ ಎಂದು ತಿಳಿಸಿದರು

ಪಟ್ಟಣ ಪಂಚಾಯಿತಿ ಮಾಜಿ ಅಧ್ಯಕ್ಷ ಜಿ. ಪ್ರಕಾಶ್ ಮತ್ತು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲ್ಲೂಕು ಅಧ್ಯಕ್ಷ ಎಸ್ ರಾಜಶೇಖರ್ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು

ಕಾರ್ಯಕ್ರಮದಲ್ಲಿ ಪಟ್ಟಣ ಪಂಚಾಯಿತಿ ಸದಸ್ಯ ಎಸ್ ಖಾದರ್ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಟಿ. ಕೆ. ಕಲೀಮ್ ವುಲ್ಲಾ ಗುರುರಾಜಪ್ಪ ಸಂಜೀವಪ್ಪ ಬಡೋಬಯ್ಯ ನಾಗಸಮುದ್ರ ಗೋವಿಂದಪ್ಪ ಬೇಡರೆಡ್ಡಿಹಳ್ಳಿ ಬಸವರೆಡ್ಡಿ ಕೊಂಡಾಪುರ ಪರಮೇಶ್ ಬಿಜಿಕೆರೆ ನಾಗಬೂಷಣ ಮರ್ಲಹಳ್ಳಿ ರವಿಕುಮಾರ್ ಯರ್ಜನಹಳ್ಳಿ ನಾಗರಾಜ ನಂಜಪ್ಪ ನಾಯಕ ಮುನ್ನಾ ಹಾಗೂ ಪತ್ರಕರ್ತರು ಉಪಸ್ಥಿತರಿದ್ದರು

# ವಿದ್ಯಾರ್ಥಿಗಳಿಗೆ ಪ್ರಜಾಪ್ರಭುತ್ವದ ತಿಳುವಳಿಕೆ ಅಗತ್ಯ : ನಾಗೇಂದ್ರಪ್ಪ

**ಹೊಸದುರ್ಗ** : ಪ್ರಜಾಪ್ರಭುತ್ವ ರಾಷ್ಟ್ರದಲ್ಲಿ ಚುನಾವಣೆ ಎಂಬುದು ಬಹಳ ಮಹತ್ತರವಾದದ್ದು, ದೇಶದಲ್ಲಿ ನಡೆಯುವ ಚುನಾವಣೆಗಳ ಕಾರ್ಯವಿಧಾನ ಮತ್ತು ಸಂಸದೀಯ ವ್ಯವಸ್ಥೆಯ ಕುರಿತಾಗಿ ವಿದ್ಯಾರ್ಥಿಗಳಿಗೆ ತಿಳುವಳಿಕೆ ಅಗತ್ಯವಾಗಿದೆ ಎಂದು ಉಪ ಪ್ರಾಂಶುಪಾಲ ನಾಗೇಂದ್ರಪ್ಪ ಹೇಳಿದರು.



ಪಟ್ಟಣದ ಸರ್ಕಾರಿ ಪದವಿಪೂರ್ವ ಕಾಲೇಜು ಪ್ರೌಢಶಾಲಾ ವಿಭಾಗದಲ್ಲಿ ಹೊಸದುರ್ಗ ಮತದಾರರ ಸಾಕ್ಷರತಾ ಕ್ಲಬ್ ವತಿಯಿಂದ ಗುರುವಾರ ಆಯೋಜಿಸಿದ್ದ 2023 – 24 ನೇ ಸಾಲಿನ ಶಾಲಾ ಸಂಸತ್ ಚುನಾವಣೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಚುನಾವಣೆ ಪ್ರಜಾಪ್ರಭುತ್ವ ವ್ಯವಸ್ಥೆಯ ಭದ್ರಬುನಾದಿಯಾಗಿದೆ. ಪ್ರಜಾಪ್ರಭುತ್ವ ತತ್ವಗಳು ಹಾಗೂ ಚುನಾವಣಾ ನಿಯಮಗಳನ್ನು ಭವಿಷ್ಯದ ಮತದಾರರಲ್ಲಿ ಮೂಡಿಸುವ ಸಲುವಾಗಿ ಶಾಲೆಯಲ್ಲಿ ಯುವ ಸಂಸತ್ ಚುನಾವಣೆಯನ್ನು ಏರ್ಪಡಿಸಲಾಗಿದೆ. ಶಾಲಾ ಸಂಸತ್ತಿಗೆ 24 ಸದಸ್ಯರನ್ನು ಆಯ್ಕೆ ಮಾಡಲು 8ನೇ ತರಗತಿಯಿಂದ 32 ವಿದ್ಯಾರ್ಥಿಗಳು, 9ನೇ ತರಗತಿಯಿಂದ 20 ವಿದ್ಯಾರ್ಥಿಗಳು, 10ನೇ ತರಗತಿಯಿಂದ 32 ವಿದ್ಯಾರ್ಥಿಗಳು ಒಟ್ಟು 92 ವಿದ್ಯಾರ್ಥಿಗಳು ಚುನಾವಣೆಯಲ್ಲಿ ಅಭ್ಯರ್ಥಿಗಳಾಗಿ ಕಣದಲ್ಲಿದ್ದರು ಎಂದು ತಿಳಿಸಿದರು.

8ನೇ ತರಗತಿಯಲ್ಲಿ 270 ವಿದ್ಯಾರ್ಥಿಗಳು, 9ನೇ ತರಗತಿಯಲ್ಲಿ 256 ವಿದ್ಯಾರ್ಥಿಗಳು, 10ನೇ ತರಗತಿಯಲ್ಲಿ 305 ವಿದ್ಯಾರ್ಥಿಗಳು ಚುನಾವಣೆಯಲ್ಲಿ ಮತ ಚಲಾಯಿಸಿದ್ದಾರೆ. ಈ ಯುವ ಸಂಸತ್ ಚುನಾವಣೆಯನ್ನು ಸಮಾಜ ವಿಜ್ಞಾನ ವಿಭಾಗದ ಶಿಕ್ಷಕರಾದ ತಿಮ್ಮಪ್ಪ, ಶ್ರೀಧರ್ ಶೆಟ್ಟಿ, ಕೃಷ್ಣಮೂರ್ತಿ ಆಯೋಜನೆ ಮಾಡಿದ್ದರು. ಒಟ್ಟು 3 ಬೂತ್ ಗಳಲ್ಲಿ ಮತದಾನ ಮಾಡಲು ಅವಕಾಶ ಮಾಡಲಾಗಿತ್ತು. ಮೊದಲನೇ ಬೂತ್ ಪಿಆರ್ ಓ ಆಗಿ ಜ್ಯೋತಿ, ಪಿಓಗಳಾಗಿ ಪ್ರಮೀಳಾ, ಸುಷ್ಮಾ, ಭಾರತಮ್ಮ ಇದ್ದರು. ಎರಡನೇ ಬೂತ್ ಪಿ ಆರ್ ಓ ಆಗಿ ಈಶ್ವರಪ್ಪ, ಪಿಓ ಗಳಾಗಿ ಚಿದಾನಂದ್, ಪ್ರಸನ್ನ, ಶಿವಶಂಕರ್ ಇದ್ದರು. ಮೂರನೇ ಬೂತ್ ನ ಪಿಆರ್ ಓ ಆಗಿ ವಿನುತಾ, ಪಿಓಗಳಾಗಿ ಚಂದ್ರಶೇಖರ್, ನಾಗಮಣಿ, ಕೃಷ್ಣಮೂರ್ತಿ ಇದ್ದರು. ಉಸ್ತುವಾರಿಗಳಾಗಿ ಮಂಜುನಾಥ್, ವೆಂಕಟೇಶ್ ಮತ್ತು ಈಶ್ವರಪ್ಪ ಚುನಾವಣೆಯನ್ನು ಅತ್ಯಂತ ಶಿಸ್ತುಬದ್ಧವಾಗಿ ನಡೆಸಿದರು. ಚುನಾವಣೆ ನಡೆಸಲು ಶಾಲಾ ಸಿಬ್ಬಂದಿಗಳು ಸಹಕಾರ ನೀಡಿದ್ದಾರೆ ಎಂದು ಮಾಹಿತಿ ನೀಡಿದರು.

ಮಕ್ಕಳು ಆಧಾರ್ ಕಾರ್ಡ್ ಹಿಡಿದು ಸರದಿ ಸಾಲಿನಲ್ಲಿ ನಿಂತು ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಂಡರು. ಚುನಾವಣಾ ಆಯೋಗ ಚುನಾವಣಾ ಆಯೋಜಿಸುವ ರೀತಿಯಲ್ಲಿ ನೀತಿ ನಿಯಮಗಳನ್ನು ಪಾಲಿಸಿ ಮತದಾನ ನಡೆಸಿದ್ದು ವಿಶೇಷವಾಗಿತ್ತು. ಚುನಾವಣೆ ನಂತರ ಮತ ಎಣಿಕೆ ನಡೆಸಿ, 24 ವಿದ್ಯಾರ್ಥಿಗಳನ್ನು ವಿಜೇತರನ್ನಾಗಿ ಘೋಷಿಸಲಾಯಿತು.

# ಗುಣಮಟ್ಟದ ಶಿಕ್ಷಣದಿಂದ ಒಳ್ಳೆ ಫಲಿತಾಂಶ : ಕೆ. ರವಿಶಂಕರ್‌ರೆಡ್ಡಿ

**ಚಿತ್ರದುರ್ಗ :** ಹಿಂದಿ ಶಿಕ್ಷಕರು ಮಕ್ಕಳ ಮನಸ್ಸಿಗೆ ನಾಟುವ ರೀತಿಯಲ್ಲಿ ಗುಣಮಟ್ಟದ ಶಿಕ್ಷಣ ನೀಡುವುದರಿಂದ ಒಳ್ಳೆ ಫಲಿತಾಂಶ ಪಡೆಯಬಹುದು ಎಂದು ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ರವಿಶಂರ್‌ರೆಡ್ಡಿ ತಿಳಿಸಿದರು.

ಕರ್ನಾಟಕ ರಾಜ್ಯ ಪ್ರೌಢಶಾಲಾ ಹಿಂದಿ ಶಿಕ್ಷಕರ ಸಂಘ, ಜಿಲ್ಲಾ ಶಾಖೆಯಿಂದ ಸಿ.ಎನ್.ಸಿ. ಪ್ರೌಢಶಾಲೆಯಲ್ಲಿ ಜಿಲ್ಲೆಯ ಹಿಂದಿ ಶಿಕ್ಷಕರುಗಳಿಗೆ ಗುರುವಾರ ಹಮ್ಮಿಕೊಳ್ಳಲಾಗಿದ್ದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡುತ್ತ ಉತ್ತಮ ಫಲಿತಾಂಶ ಬರುವಲ್ಲಿ ಹಿಂದಿ ಶಿಕ್ಷಕರುಗಳ ಶ್ರಮವು ಇದೆ ಎಂದು ಗುಣಗಾನ ಮಾಡಿದರು.

ಕಳೆದ ಮಾರ್ಚ್–ಏಪ್ರಿಲ್‌ನಲ್ಲಿ ನಡೆದ ಹತ್ತನೆ ತರಗತಿ ಪರೀಕ್ಷೆಯಲ್ಲಿ ಚಿತ್ರದುರ್ಗ ಜಿಲ್ಲೆ ರಾಜ್ಯಕ್ಕೆ ಒಂದನೆ ಸ್ಥಾನ ಗಳಿಸಲು ನಿರಂತರ ಶೈಕ್ಷಣಿಕ ಚಟುವಟಿಕೆಗಳನ್ನು ಏರ್ಪಡಿಸಿದ್ದರಿಂದ ಸಾಧ್ಯವಾಯಿತು. ಆರಂಭದಿಂದಲೂ ಕ್ರಿಯಾ ಯೋಜನೆಗಳನ್ನು ತಯಾರಿಸಿ ಮಕ್ಕಳಿಗೆ ಮನಮುಟ್ಟುವ ರೀತಿಯಲ್ಲಿ ಶಿಕ್ಷಕರುಗಳು ಪಾಠ ಬೋಧಿಸಿದ್ದಾರೆ. 2023–24 ನೇ ಸಾಲಿನಲ್ಲಿಯೂ ಚಿತ್ರದುರ್ಗ ಜಿಲ್ಲೆ ಹತ್ತನೆ ತರಗತಿ ಪರೀಕ್ಷೆಯಲ್ಲಿ ಒಂದನೆ ಸ್ಥಾನವನ್ನು ಕಾಪಾಡಿಕೊಳ್ಳಬೇಕಾಗಿರುವುದರಿಂದ ಈಗಿನಿಂದಲೇ ಶಿಕ್ಷಕರುಗಳು ಮಕ್ಕಳನ್ನು ಅಣಿಗೊಳಿಸುವಂತೆ ಸೂಚಿಸಿದರು.

ಶೈಕ್ಷಣಿಕ ಪ್ರಗತಿ ತುಂಬಾ ಮುಖ್ಯ. ಮಕ್ಕಳಿಗೆ ಕಾಲ ಕಾಲಕ್ಕೆ ತಕ್ಕಂತೆ ಸರಿಯಾದ ಮಾರ್ಗದರ್ಶನ ನೀಡುವುದು ಶಿಕ್ಷಕರುಗಳ ಜವಾಬ್ದಾರಿ. ಕೆಲಸದಲ್ಲಿ ನಿಷ್ಠೆ ಮತ್ತು ಬದ್ದತೆ ಇದ್ದಾಗ ಗುಣಮಟ್ಟದ ಫಲಿತಾಂಶ ಪಡೆಯುವುದು ಕಷ್ಟವೇನಲ್ಲ. ಕ್ರಿಯಾ ಯೋಜನೆಗೆ ತಕ್ಕಂತ ಮಕ್ಕಳಿಗೆ ಪಾಠ ಪ್ರವಚನಗಳಾಗಬೇಕೆಂದು ತಾಕೀತು ಮಾಡಿದರು.



ಚಿಪ್ರೌಢಶಾಲಾ ಹಿಂದಿ ಶಿಕ್ಷಕರಿಗೆ ಹಮ್ಮಿಕೊಳ್ಳಲಾಗಿದ್ದ ಜಿಲ್ಲಾ ಮಟ್ಟದ ಕಾರ್ಯಾಗಾರವನ್ನು ಡಿ.ಡಿ.ಪಿ.ಐ. ಕೆ.ರವಿಶಂಕರ್‌ರೆಡ್ಡಿ ಉದ್ಘಾಟಿಸಿ ಮಾತನಾಡಿದರು.

ಎಸ್.ಎಸ್.ಎಲ್.ಸಿ. ಫಲಿತಾಂಶ ವಿಶ್ಲೇಷಣೆ ಹಾಗೂ ಉಪನ್ಯಾಸದಲ್ಲಿ ಸಂಪನ್ಮೂಲ ವ್ಯಕ್ತಿಗಳಾದ ಶ್ರೀನಿವಾಸ್ ಕುಮಾರ್, ಕೇಶವ್ ಈಶ್ವರಪ್ಪ ಕೊಂಗಿ ಇವರುಗಳು ಹಿಂದಿ ಶಿಕ್ಷಕರುಗಳಿಗೆ ಉಪಯುಕ್ತ ಮಾಹಿತಿ ನೀಡಿದರು.

ಹತ್ತನೆ ತರಗತಿ ಪರೀಕ್ಷೆ ನೋಡಲ್ ಅಧಿಕಾರಿ ಎನ್. ಆರ್.ತಿಪ್ಪೇಸ್ವಾಮಿ, ಡಿ.ವೈ.ಪಿ.ಸಿ. ಸಿ.ಎಂ.ತಿಪ್ಪೇಸ್ವಾಮಿ, ವಿಷಯ ಪರಿವೀಕ್ಷಕರುಗಳಾದ ಶಿವಣ್ಣ, ಗೋವಿಂದಪ್ಪ, ಸವಿತ, ಚಂದ್ರಣ್ಣ, ಓಲೇಕಾರ್, ಗೋವಿಂದರೆಡ್ಡಿ, ಶ್ರೀನಿವಾಸ್‌ರೆಡ್ಡಿ, ಹಿಂದಿ ಸಹ ಶಿಕ್ಷಕ ಆನಂದ್ ಡಿ.ಎಸ್. ವೇದಿಕೆಯಲ್ಲಿದ್ದರು.

## ಆರ್ಥಿಕ ಬಲವೃದ್ದಿಗೆ ರೇಷ್ಮೆ ಬೆಳೆ ಉಪಯುಕ್ತ

**ಚಳ್ಳಕೆರೆ :** ಕಳೆದ ಕೆಲವು ವರ್ಷಗಳಿಂದ ಇಲ್ಲಿನ ರೇಷ್ಮ ಇಲಾಖೆಯ ಸಹಾಯಕ ನಿರ್ದೇಶಕರಾಗಿ ಕಾರ್ಯನಿರ್ವಹಿಸಿದ ಕೆಂಚೋಜಿರಾವ್ ತಾಲ್ಲೂಕಿನಲ್ಲಿ ರೇಷ್ಮೆ ಬೆಳೆ ಬೆಳೆಯುವ ಬಗ್ಗೆ ರೈತರಿಗೆ ಸೂಕ್ತ ಮಾರ್ಗದರ್ಶನ ನೀಡಿ ತಾಲ್ಲೂಕಿನಲ್ಲಿ ಹೆಚ್ಚು ಪ್ರದೇಶದಲ್ಲಿ ರೇಷ್ಮೆ ಬೆಳೆ ಬೆಳೆಯಲು ಪ್ರೋತ್ಸಾಹ ನೀಡಿದ್ದು, ಇಂದು ಅವರು ಸೇವೆಯಿಂದ ನಿವೃತ್ತರಾದರೂ ಅವರ ಮಾರ್ಗದರ್ಶನ ರೈತ ಸಮುದಾಯಕ್ಕೆ ಹೆಚ್ಚು ಉಪಯುಕ್ತವಾಗಿದೆ ಎಂದು ಜಿಲ್ಲಾ ಸಂಯೋಜಕ ಡಿ.ಲೋಕೇಶ್ ತಿಳಿಸಿದರು.

ಅವರು, ಕೆಂಚೊಜೀರಾವ್‌ರವರ ಬೀಳ್ಕೊಡಿಗೆ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು. ರೇಷ್ಮೆ ಇಲಾಖೆ ಕಾರ್ಯಾಲಯದಲ್ಲಿ ಕಾರ್ಯಕ್ರಮ ಹಮ್ಮಿಕೊಂಡು ತಾಲ್ಲೂಕಿನ ರೈತರು, ಕಚೇರಿ ಸಿಬ್ಬಂದಿ ವರ್ಗ ಹಾಗೂ ರೇಷ್ಮೆ ಉತ್ಪಾದಕ ಕಂಪನಿ ಕಾರ್ಯಕ್ರಮವನ್ನು ಆಯೋಜಿಸಿತು.

ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದ ಕೆಂಚೋಜಿರಾವ್, ಚಳ್ಳಕೆರೆ ತಾಲ್ಲೂಕಿನಲ್ಲಿ ರೇಷ್ಮೆ ಬೆಳೆಯುವ ಬಗ್ಗೆ ಹೆಚ್ಚು ಆಸಕ್ತಿ ಇರಲಿಲ್ಲ. ಶೇಂಗಾ, ಸೂರ್ಯಕಾಂತಿ ಬೆಳೆಯಲು ಹೆಚ್ಚು ಆಸಕ್ತಿ ತೋರುತ್ತಿದ್ದ ಸಂದರ್ಭದಲ್ಲಿ ತಾಲ್ಲೂಕಿನ ಕೆಲವು ಪ್ರದೇಶಗಳಲ್ಲಿ ರೇಷ್ಮೆ ಬೆಳೆಯನ್ನು ಬೆಳೆದು ಆರ್ಥಿಕ ಲಾಭ ಪಡೆ–ಯದ ರೇಷ್ಮೆ ಬೆಳೆಗಾರರೊಂದಿಗೆ ಕೆಲ ರೈತರನ್ನು ಕರೆದೊಯ್ದು ಚರ್ಚೆ ನಡೆಸಿದಾಗ ರೇಷ್ಮೆ ಬೆಳೆ ಬೆಳೆಯಲು ಮುಂದಾದರು. ಕೇವಲ 200–300 ಎಕರೆಯಲ್ಲಿದ್ದ ರೇಷ್ಮೆ ಬೆಳೆ ಈಗ ಸುಮಾರು 1500 ಎಕರೆಯಲ್ಲಿ ಪ್ರದೇಶದಲ್ಲಿ ರೇಷ್ಮೆ ಬೆಳೆ ಇದೆ ಎಂದರು.

ಸಿಇಒ ಸುಷ್ಮ, ಅಧ್ಯಕ್ಷ ಎಂ.ತಿಪ್ಪೇಸ್ವಾಮಿ, ಉಪಾಧ್ಯಕ್ಷ ಮೀರಸಾಬಿಹಳ್ಳಿ ತಿಪ್ಪೇಸ್ವಾಮಿ, ಜೆ.ತಿಪ್ಪೇಸ್ವಾಮಿ, ಮಂಜುನಾಥ, ರಾಮಚಂದ್ರಪ್ಪ, ರಾಜಣ್ಣ, ಚಂದ್ರಪ್ಪ ಮುಂತಾದವರು ಉಪಸ್ಥಿತರಿದ್ದರು.



ಚಳ್ಳಕೆರೆ ನಗರದ ರೇಷ್ಮೆ ಇಲಾಖೆ ಕಾರ್ಯಾಲಯದಲ್ಲಿ ಕೆಂಚೊಜೀರಾವ್‌ರವರನ್ನು ಸನ್ಮಾನಿಸಿ, ಬೀಳ್ಕೊಟ್ಟರು.

## ತೋಟಗಾರಿಕೆ ಬೆಳೆ ವಿಮೆ ಅವಧಿ ವಿಸ್ತರಣೆ



**ಚಿತ್ರದುರ್ಗ :** 2023–24ನೇ ಸಾಲಿನ ಮುಂಗಾರು ಹಂಗಾಮಿನ ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ತೋಟಗಾರಿಕೆ ಬೆಳೆ ವಿಮಾ ಅವಧಿಯನ್ನು ವಿಸ್ತರಿಸಲಾಗಿದೆ. ಆಗಸ್ಟ್ 7 ಕೊನೆಯ ದಿನವಾಗಿದೆ.

ಚಿತ್ರದುರ್ಗ ಜಿಲ್ಲೆಯಲ್ಲಿ ಅಡಿಕೆ ಬೆಳೆಗೆ 183, ದಾಳಿಂಬೆ ಬೆಳೆಗೆ 164, ಮಾವು ಬೆಳೆಗೆ 180 ಗ್ರಾಮ ಪಂಚಾಯಿತಿ, ನಗರ ಸ್ಥಳೀಯ ಸಂಸ್ಥೆಗಳನ್ನು ವಿಮಾ ಘಟಕಗಳಾಗಿ ಅಧಿಸೂಚಿಸಲಾಗಿದೆ.

ಪ್ರತಿ ಹೆಕ್ಟೆರ್ ಅಡಿಕೆ ಬೆಳೆಯ ವಿಮಾ ಮೊತ್ತ ರೂ.1,28,000 ಇದ್ದು, ರೈತರ ರೂ.6,400 ವಿಮಾ ಕಂತು ಭರಿಸಬೇಕು. 2023 ರ ಆಗಸ್ಟ್ 1 ರಿಂದ 2024ರ ಜೂನ್ 30 ವರೆಗೆ ವಿಮಾ ಅವಧಿ ಅನ್ವಯಿಸಲಿದೆ. ದಾಳಿಂಬೆ ಬೆಳೆ ವಿಮಾ ಮೊತ್ತ ರೂ.1,27,000 ಇದ್ದು, ರೈತರ ವಂತಿಕೆ ರೂ.6350 ಹಾಗೂ ಮಾವು ಬೆಳೆ ವಿಮಾ ಮೊತ್ತ ರೂ.80,000 ಇದ್ದು, ರೈತರ ವಂತಿಕೆ ರೂ.4000 ಇದೆ. 2023 ರ ಆಗಸ್ಟ್ 1 ರಿಂದ 2024ರ ಮೇ 31 ವರೆಗೆ ವಿಮಾ ಅವಧಿ ಅನ್ವಯಿಸಲಿದೆ. ಬೆಳೆ ಸಾಲ ಪಡೆದ ಮತ್ತು ಬೆಳೆ ಸಾಲ ಪಡೆಯದ ರೈತರಿಗೆ ವಿಮಾ ಮೊತ್ತವು ಏಕ ರೂಪವಾಗಿರುತ್ತದೆ. ಪ್ರಸಕ್ತ ಸಾಲಿನ ಪಹಣಿ ಪತ್ರಿಕೆ, ಆಧಾರ್ ಕಾರ್ಡ್ ಹಾಗೂ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿಯೊಂದಿಗೆ, ರೈತರು ಹತ್ತಿರದ ಗ್ರಾಮ ಒನ್ ಕೇಂದ್ರ ಅಥವಾ ಬ್ಯಾಂಕ್‌ಗಳಲ್ಲಿ ಅಥವಾ ಸಿ.ಎಸ್.ಸಿ ಕೇಂದ್ರಗಳಲ್ಲಿ ವಿಮಾ ಯೋಜನೆಗೆ ನೊಂದಾಯಿಸಿಕೊಳ್ಳಬಹುದು.

ಹವಾಮಾನ ಅಂಶಗಳಾದ ತಾಪಮಾನ, ಗಾಳಿಯ ವೇಗ, ಮಳೆಯ ಪ್ರಮಾಣ, ಆದ್ರತೆ ಇತ್ಯಾದಿ ಮಾಹಿತಿಗಳನ್ನು ಸ್ಥಳೀಯವಾಗಿ ಲಭ್ಯವಿರುವ ಟೆಲಿಮೆಟ್ರಿಕ್ ಮಳೆ ಮಾಪನ ಕೇಂದ್ರಗಳಲ್ಲಿ ದಾಖಲಿಸುವ ಅಂಶಗಳ ಆಧಾರದ ಮೇಲೆ ಬೆಳೆ ವಿಮಾ ನಷ್ಟವನ್ನು ತೀರ್ಮಾನಿಸಲಾಗುವುದು ಕ್ಷೇಮಾ ಜನರಲ್ ವಿಮಾ ಸಂಸ್ಥೆಯು ಹಂಚಿಕೆ ಆಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ತೋಟಗಾರಿಕೆ ಹಾಗೂ ರೈತ ಸಂಪರ್ಕ ಕೇಂದ್ರ ಅಥವಾ ಬ್ಯಾಂಕ್ ಅಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ತೋಟಗಾರಿಕೆ ಉಪನಿರ್ದೇಶಕರು ತಿಳಿಸಿದ್ದಾರೆ.

# ಲಂಚಕ್ಕೆ ಬೇಡಿಕೆ ನಾಲ್ವರು ಪೊಲೀಸರ ಸೆರೆ

**ನಮ್ಮ ಜನ ವಾರ್ತೆ ಬೆಂಗಳೂರು :** ಅಪರಾಧ ಕೃತ್ಯದ ಆರೋಪಿಯನ್ನು ಬಂಧಿಸದಿರಲು 4 ಲಕ್ಷ ರೂಗಳಿಗೆ ಬೇಡಿಕೆಯಿಟ್ಟಿದ್ದ ಆರೋಪದಲ್ಲಿ ನಗರದ ವೈಟ್ ಫೀಲ್ಡ್ ಉಪ ವಿಭಾಗದ ಪೊಲೀಸ್ ಇನ್ಸ್‌ಪೆಕ್ಟರ್ ಶಿವಪ್ರಕಾಶ್ ಸೇರಿದಂತೆ ನಾಲ್ವರು ಪೊಲೀಸರನ್ನು ಕೇರಳದ ಕೊಚ್ಚಿಯಲ್ಲಿ ಬಂಧಿಸಲಾಗಿದೆ.

ಬಂಧಿತರು ಬೆಂಗಳೂರು ವೈಟ್ ಫೀಲ್ಡ್ ಸೆನ್ ಪೊಲೀಸರಾಗಿದ್ದಾರೆ. ಇವರನ್ನು ಕೊಚ್ಚಿಯ ಕಲಂಚೇರಿ ಪೊಲೀಸರು ಬಂಧಿಸಿದ್ದಾರೆ. ಆನ್‌ಲೈನ್ ವಂಚನೆ ಪ್ರಕರಣದ ಮಾಲು ಜಪ್ತಿಗೆ ಹೋಗಿದ್ದಾಗ ಲಂಚಕ್ಕೆ ಬೇಡಿಕೆ ಇಟ್ಟಿದ್ದರು ಎಂಬ ಆರೋಪದಡಿ ಬಂಧನಕ್ಕೊಳಗಾಗಿದ್ದಾರೆ.

ಏನಿದು ಪ್ರಕರಣ:

ಉದ್ಯೋಗ ಕೊಡಿಸುವುದಾಗಿ ಸಾಫ್ಟ್‌ವೇರ್ ಇಂಜಿನಿಯರ್‌ಗೆ ವಂಚನೆ ಮಾಡಲಾಗಿತ್ತು. ಚಂದಕ್ ಶ್ರೀಕಾಂತ್ ಎಂಬಾತ ಈ ಸಂಬಂಧ ದೂರು ಕೊಟ್ಟಿದ್ದ. ಆನ್‌ಲೈನ್ ಮೂಲಕ 26 ಲಕ್ಷ ರೂ. ಹಣವನ್ನು ಕಳೆದುಕೊಂಡಿದ್ದ. ಈ ಪ್ರಕರಣ ತನಿಖೆಯನ್ನು ವೈಟ್ ಫೀಲ್ಡ್ ಸಿಇಎನ್ ಪೊಲೀಸರು ನಡೆಸುತ್ತಿದ್ದರು. ಮೊದಲಿಗೆ ಮಡಿಕೇರಿಯ ಐಸಾಕ್ ಬಗ್ಗೆ ಸುಳಿವು ಸಿಕ್ಕಿತ್ತು.ಅಲ್ಲಿಗೆ ತೆರಳಿ ಪರಿಶೀಲನೆ ನಡೆಸಿದಾಗ ಐಸಾಕ್ ಅಕೌಂಟ್‌ನಲ್ಲಿ 2 ಕೋಟಿ ವರ್ಗಾವಣೆಯಾಗಿರುವುದು ಪತ್ತೆಯಾಯಿತು.

**ವಂಚನೆ ಬಗ್ಗೆ ಸಾಕ್ಷಿ :** ಇದರ ಜಾಡು ಹಿಡಿದು ವೈಟ್ ಫೀಲ್ಡ್ ಸಿಇಎನ್ ಇನ್‌ಸ್ಪೆಕ್ಟರ್ ಶಿವಪ್ರಕಾಶ್ ಮತ್ತು ತಂಡ ಕೇರಳದ ಕೊಚ್ಚಿಗೆ ತೆರಳಿ ನೌಶಾದ್ ಎಂಬವನಿಂದ ಆನ್‌ಲೈನ್ ವಂಚನೆಯ ಸಾಕ್ಷಿ ಸಿಕ್ಕಿತ್ತು

ಕೂಡಲೇ ಬಂಧಿಸಲು ಮುಂದಾದ ವೈಟ್ ಫೀಲ್ಡ್ ಸಿಇಎನ್ ಪೊಲೀಸರು, ಬಂಧಿಸದೇ ಇರಲು 3.95 ಲಕ್ಷಕ್ಕೆ ಬೇಡಿಕೆಯಿಟ್ಟಿದ್ದರು. ಈ ಸಂಬಂಧ ನೌಶಾದ್ ಕಲ್ಲಂಚೇರಿ ಪೊಲೀಸರಿಗೆ ದೂರು ನೀಡಿದ್ದ.ಪ್ರಕರಣದಲ್ಲಿ ತನಿಖೆಗೆ ಎಂದು ಬಂದಿರುವುದಾಗಿ ನಗರ ಪೊಲೀಸರು ತಿಳಿಸಿದ್ದರು. ಆದರೂ ಇನ್ಸ್ ಪೆಕ್ಟರ್ ಶಿವಪ್ರಕಾಶ್ ಸೇರಿದಂತೆ ಮೂವರನ್ನು ವಶಕ್ಕೆ ಪಡೆದು ಎಫ್‌ಐಆರ್ ದಾಖಲಿಸಲಾಗಿದೆ. ಇನ್‌ಸ್ಪೆಕ್ಟರ್ ಶಿವಪ್ರಕಾಶ್, ಶಿವಾನಿ, ವಿಜಯ್ ಕುಮಾರ್, ಸಂದೇಶ್ ಬಂಧನಕ್ಕೊಳಗಾದ ಸಿಬ್ಬಂದಿಯಾಗಿದ್ದಾರೆ.

**ಕೊಚ್ಚಿ ಡಿಸಿಪಿ ಮಾಹಿತಿ :** ಕರ್ನಾಟಕದಲ್ಲಿ ನಡೆದ ವಂಚನೆ ಪ್ರಕರಣದ ಸಂಬಂಧ ಆರೋಪಿಯನ್ನು ಬಂಧಿಸಲು ಕರ್ನಾಟಕ ಪೊಲೀಸರು ಆಗಸ್ಟ್ 1ರಂದು ಕೊಚಿ–ಗೆ ಬಂದಿದ್ದು.. ಅಲ್ಲಿ ಅವರು ಇಬ್ಬರು ಆರೋಪಿಗಳಿಂದ 3.95 ಲಕ್ಷ ಲಂಚ ಪಡೆದಿದ್ದಾರೆ ಎಂದು ಆರೋಪಿಸಲಾಗಿದೆ. ದೂರಿನನ್ವಯ ಕೊಚ್ಚಿಯ ಕಮಲಶ್ಶೇರಿ ಪೊಲೀಸರು ಕರ್ನಾಟಕದ 4 ಪೊಲೀಸ್ ಅಧಿಕಾರಿಗಳನ್ನು ವಶಕ್ಕೆ ಪಡೆದುಕೊಂಡಿ–ದ್ದಾರೆ ಎಂದು ಕೊಚ್ಚಿ ಪೊಲೀಸ್ ಉಪ ಆಯುಕ್ತ ಬೇಬಿ ಪಿವಿ ತಿಳಿಸಿದ್ದಾರೆ.

ಪ್ರಕರಣ ಸಂಬಂಧ ನಾವು ಕರ್ನಾಟಕ ಪೊಲೀಸರೊಂದಿಗೆ ಸಂಪರ್ಕದಲ್ಲಿದ್ದೇವೆ. ಅವರ ಗುರುತು ಹಾಗೂ ಕೊಚಿ–ಗೆ ಬಂದಿರುವ ಉದ್ದೇಶದ ಬಗ್ಗೆ ಮಾಹಿತಿ ಪಡೆಯುತ್ತಿದ್ದೇವೆ. ಮಾಹಿತಿ ಪಡೆದು ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು ಈಗಾಗಲೇ ಪ್ರಕರಣ ದಾಖಲಾಗಿದೆ ಎಂದು ಹೇಳಿದ್ದಾರೆ.

ಪರಿಶೀಲನೆ ಬಳಿಕ ವಶಕ್ಕೆ ಪಡೆದವರ ಮಾಹಿತಿ ನೀಡುವುದಾಗಿ ಪೊಲೀಸರು ಹೇಳಿದ್ದಾರೆ. ಬೆಂಗಳೂರಿನ ವೈಟ್‌ಫೀಲ್ಡ್‌ನಿಂದ ಈ ಪೊಲೀಸರು ತೆರಳಿದ್ದರು ಎಂದು ಗೊತ್ತಾಗಿದೆ ಎಂದು ಹೇಳಿದರು.

## ಫಾಸ್ಟ್ ನ್ಯೂಸ್

### ಕೇಂದ್ರ ಕಾರಾಗೃಹದಲ್ಲಿ ಅಕ್ರಮ

ಬೆಳಗಾವಿಯ ಹಿಂಡಲಗಾ ಕೇಂದ್ರ ಕಾರಾಗೃಹದಲ್ಲಿ ಅಕ್ರಮ ನಡೆಯುತ್ತಿದ್ದು ಟಿವಿ9 ಬಯಲು ಮಾಡಿದೆ. ಹಿಂಡಲಗಾ ಜೈಲು ರಾಜ್ಯದ 2ನೇ ಅತಿದೊಡ್ಡ ಕೇಂದ್ರ ಕಾರಾಗೃಹ. ಕೈದಿ ಸುರೇಶ್ ಜೈಲಿನ ಅಕ್ರಮದ ಬಗ್ಗೆ ಮಾಹಿತಿ ನೀಡಿದ್ದಾರೆ. ಸೆಲ್‌ನ ಪರಿಸ್ಥಿತಿ ಹೇಗಿದೆ ಅನ್ನೋ ವಿಡಿಯೋ ಟಿವಿ9ಗೆ ಲಭ್ಯವಾಗಿದೆ. ಇಲ್ಲಿ ಜೈಲು ಸಿಬ್ಬಂದಿ ಹಣ ನೀಡುವ ಕೈದಿಗಳಿಗೆ ಎಲ್ಲಾ ವ್ಯವಸ್ಥೆ ಕಲ್ಪಿಸುತ್ತಾರೆ. ಹಣ ನೀಡದ ಕೈದಿಗಳ ಮೇಲೆ ದೌರ್ಜನ್ಯ, ದಬ್ಬಾಳಿಕೆ ನಡೆಸುತ್ತಾಋಎ. ಹಣ ಇಲ್ಲದವರು ಪ್ರಶ್ನೆ ಮಾಡಿದ್ರೆ ಅವರ ಮೇಲೆ ಜೈಲು ಸಿಬ್ಬಂದಿ ಹಲ್ಲೆ ಮಾಡ್ತಾರೆ ಎಂಬ ಮಾಹಿತಿ ಸಿಕ್ಕಿದೆ.

### ಎತ್ತಿನಭುಜಕ್ಕೆ ಪ್ರವಾಸಿಗರಿಗೆ ತಾತ್ಕಾಲಿಕ ನಿರ್ಬಂಧ

ರಾಜ್ಯದಲ್ಲಿ ಮಳೆ ಪ್ರಮಾಣ ಬಹುತೇಕ ಇಳಿಮುಖವಾದರೂ ಚಿಕ್ಕಮಗಳೂರು ಜಿಲ್ಲೆಯ ಘಟ್ಟ ಪ್ರದೇಶದಲ್ಲಿ ಮಳೆಯಾಗುತ್ತಿದೆ. ಪ್ರವಾಸಿ ತಾಣಗಳಲ್ಲಿ ಬೆಟ್ಟಗುಡ್ಡಗಳು ಕುಸಿಯೋದು, ಮರಗಳು ಮುರಿದು ಬೀಳೋದು ಇನ್ನೂ ನಿಂತಿಲ್ಲ. ಹಾಗಾಗಿ, ಮುಂಜಾಗ್ರತ ಕ್ರಮವಾಗಿ ಜಿಲ್ಲಾಡಳಿತ ಪ್ರವಾಸಿ ಹಿತದೃಷ್ಟಿಯಿಂದ ಮೂಡಿಗೆರೆ ತಾಲೂಕಿನ ಸುಪ್ರಸಿದ್ಧ ಪ್ರವಾಸಿ ತಾಣ ಎತ್ತಿನಭುಜ ತಾಣಕ್ಕೆ ಪ್ರವಾಸಿಗರಿಗೆ ತಾತ್ಕಾಲಿಕ ನಿರ್ಬಂಧ ಹೇರಿದೆ.

### ಮೂವರು ಡ್ರಗ್ ಪೆಡ್ಲರ್‌ಗಳ ಬಂಧನ

ಮಂಗಳೂರು ಹೊರವಲಯ ಉಳ್ಳಾಲ ಬಳಿ ಕಾರ್ಯಾಚರಣೆ ನಡೆಸಿ **MDMA** ಸಮೇತ ಮೂವರು ಡ್ರಗ್ ಪೆಡ್ಲರ್?ಗಳನ್ನು ಬಂಧಿಸಲಾಗಿದೆ. ತಲಪಾಡಿ ಬಳಿ ಮಾದಕ ವಸ್ತು ಸಾಗಾಟ ಮಾಡುತ್ತಿದ್ದಾಗ ಬಂಧಿಸಲಾಗಿದೆ. ಉಳ್ಳಾಲದ ಮೊಹಮ್ಮದ್ ಹಫೀಝ್, ಸಜಿಪದ ಅಮೀರ್ ಅಲಿಯಾಸ್ ಅಮ್ಮಿ, ದಾಸರಗುಡ್ಡೆ ಮನೆ ನಿವಾಸಿ ಜಾಕೀರ್ ಹುಸೇನ್ ಅಲಿಯಾಸ್ ತಾಚೀ ಬಂಧನ. 200 ಗ್ರಾಂ ತೂಕದ 10 ಲಕ್ಷ ಮೌಲ್ಯದ **MDMA** ಜಪ್ತಿ ಮಾಡಲಾಗಿದೆ.

### ರಾಜ್ಯಕ್ಕೆ ಮತ್ತೊಂದು ವಂದೇ ಭಾರತ್ ರೈಲು

ಶೀಘ್ರದಲ್ಲೇ ರಾಜ್ಯಕ್ಕೆ ಮತ್ತೊಂದು ವಂದೇ ಭಾರತ್ ರೈಲು. ಈಗಾಗಲೇ ಕಾಚಿಗುಡ–ಧೋನ್‌ವರೆಗೆ ಪ್ರಾಯೋಗಿಕ ಸಂಚಾರ ಪೂರ್ಣಗೊಂಡಿದ್ದು ಯಶವಂತಪುರ–ಹೈದರಾಬಾದ್ ನಡುವೆ ಹೊಸ ರೈಲು ಸಂಚರಿಸಲಿದೆ. ಶೀಘ್ರದಲ್ಲೇ ಯಶವಂತಪುರವರೆಗೆ ಪ್ರಾಯೋಗಿಕ ಸಂಚಾರ ಪೂರ್ಣಗೊಳ್ಳಲಿದೆ. ಆಗಸ್ಟ್ ಅಂತ್ಯದೊಳಗೆ ಸಾರ್ವಜನಿಕ ಸಂಚಾರಕ್ಕೆ ಮುಕ್ತ ಸಾಧ್ಯತೆ.

### ಅಂಚೆ ಕಚೇರಿ ಕಟ್ಟಡ ಉದ್ಘಾಟನೆ

**ಚಿತ್ರದುರ್ಗ :** ಸಂಪರ್ಕ ಸಚಿವಾಲಯ, ಭಾರತೀಯ ಅಂಚೆ ಇಲಾಖೆ ವತಿಯಿಂದ ಇದೇ ಆಗಸ್ಟ್ 6ರಂದು ಬೆಳಿಗ್ಗೆ 11 ಗಂಟೆಗೆ ಚಿತ್ರದುರ್ಗ ತಾಲ್ಲೂಕಿನ ಭರಮಸಾಗರದಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಭರಮಸಾಗರ ಉಪ ಅಂಚೆ ಕಚೇರಿ ನೂತನ ಕಟ್ಟಡದ ಉದ್ಘಾಟನಾ ಸಮಾರಂಭ ಹಮ್ಮಿಕೊಳ್ಳಲಾಗಿದೆ.

ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವ ಎ.ನಾರಾಯಣಸ್ವಾಮಿ ಅವರು ಅಂಚೆ ಕಚೇರಿ ನೂತನ ಕಟ್ಟಡದ ಉದ್ಘಾಟನೆ ನೆರವೇರಿಸುವರು. ಮುಖ್ಯ ಅತಿಥಿಗಳಾಗಿ ಹೊಳಲ್ಕೆರೆ ಶಾಸಕ ಡಾ. ಎಂ.ಚಂದ್ರಪ್ಪ, ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್, ಕರ್ನಾಟಕ ವೃತ್ತ ಚೀಫ್ ಪೋಸ್ಟ್ ಮಾಸ್ಟರ್ ಜನರಲ್ ಎಸ್.ರಾಜೇಂದ್ರ ಕುಮಾರ್, ಭರಮಸಾಗರ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಮಂಜುಳ ಕೊಗುಂಡೆ ಕರಿಬಸಪ್ಪ ಭಾಗವಹಿಸುವರು. ಚಿತ್ರದುರ್ಗ ವಿಭಾಗ ಅಂಚೆ ಅಧೀಕ್ಷಕ ಓ.ವಿರೂಪಾಕ್ಷಪ್ಪ ಅಧ್ಯಕ್ಷತೆ ವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

### ಕೆಂಗುಂಟೆಗೆ ನಿಗಮ ಮಂಡಳಿ ಸದಸ್ಯರಾಗಿಸಲು ಮನವಿ



**ಚಿತ್ರದುರ್ಗ :** ಜಿಲ್ಲಾ ಕಾಂಗ್ರೆಸ್ ಅಸಂಘಟಿತ ಕಾರ್ಮಿಕ ವಿಭಾಗದ ಜಿಲ್ಲಾ ಉಪಾಧ್ಯಕ್ಷ ಎಲ್.ಬಿ.ರಾಜಪ್ಪ ಕೆಂಗುಂಟೆ ಇವರನ್ನು ಯಾವುದಾದರೂ ನಿಗಮ ಮಂಡಳಿ ಸದಸ್ಯರನ್ನಾಗಿ ನೇಮಕ ಮಾಡುವಂತೆ ರಾಜ್ಯದ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಹಾಗೂ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಅಸಂಘಟಿತ ಕಾರ್ಮಿಕ ವಿಭಾಗದ ರಾಜ್ಯಾಧ್ಯಕ್ಷ ಜಿ.ಎಸ್. ಮಂಜುನಾಥ್ ಇವರುಗಳಿಗೆ ಶಿಫಾರಸ್ಸು ಮಾಡುವಂತೆ ಅಸಂಘಟಿತ ಕಾರ್ಮಿಕ ವಿಭಾಗದ ಜಿಲ್ಲಾಧ್ಯಕ್ಷ ಎಸ್.ಎನ್. ಮೋಹನ್ ಪೂಜಾರಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಿಗೆ ಮನವಿ ಸಲ್ಲಿಸಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T